ಸಂಪುಟ : 8 ಸಂಚಿಕೆ : 221 ಪುಟ : 4 ಬೆಲೆ : 3.00 ಶನಿವಾರ ಅಕ್ಟೋಬರ್ 07, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 221 Pages : 4 Price : 3.00 Saturday October 07, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಜಿಲ್ಲೆಯ ಬರದ ವಸ್ತುಸ್ಥಿತಿ ಬಗ್ಗೆ ಕೇಂದ್ರ ಬರ ಅಧ್ಯಯನ ತಂಡಕ್ಕೆ ವಿವರಣೆ

# ಕೇಂದ್ರ ಬರ ಅಧ್ಯಯನ ತಂಡದಿಂದ ಜಿಲ್ಲೆಯ ಸ್ಥಿತಿ ಅವಲೋಕನ





**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ವಾಡಿಕೆ ಮಳೆ ಕೊರತೆಯಿಂದಾಗಿ ಗದಗ ಜಿಲ್ಲೆಯಲ್ಲಿ ಅಧಿಕ ಪ್ರಮಾಣದ ಬೆಳೆ ನಷ್ಟವಾಗಿದ್ದು, ಈ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ಲಕ್ಷ್ಮೇಶ್ವರ, ಶಿರಹಟ್ಟಿ ಹಾಗೂ ಗದಗ ತಾಲೂಕುಗಳಲ್ಲಿ ಮಳೆ ಕೊರತೆಯಿಂದಾಗಿ ನಷ್ಟವಾದ ಕೃಷಿ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲಿಸಿತು.

ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಹೆಚ್ಚುವರಿ ಸಲಹೆಗಾರರಾದ ಡಿ.ರಾಜಶೇಖರ ಅವರ ನೇತೃತ್ವದ ಬರ ಅಧ್ಯಯನ ತಂಡವು ಲಕ್ಷ್ಮೇಶ್ವರ ತಾಲೂಕಿನ ಹುಲಗೇರಿ ಬಣ, ಇಟ್ಟಿಗೇರಿ ಕೆರೆ, ದೊಡ್ಡೂರ, ಸೂರಣಗಿ, ಶಿರಹಟ್ಟಿ ತಾಲೂಕಿನ ಚಿಕ್ಕಸವಣೂರ, ಬೆಳ್ಳಟ್ಟಿ, ವಡವಿ, ದೇವಿಹಾಳ, ಛಬ್ಬಿ, ಶೆಟ್ಟಿಕೇರಿ ಕ್ರಾಸ, ಹಾಗೂ ಗದಗ ತಾಲೂಕಿನ ಮುಳಗುಂದ ಗ್ರಾಮಗಳ ಕೃಷಿ ಪ್ರದೇಶಕ್ಕೆ ಭೇಟಿ ನೀಡಿ, ಮಳೆ ಕೊರತೆಯಿಂದಾಗಿ ಹಾನಿಗೊಳಗಾದ ಗೋವಿನ ಜೋಳ, ಭತ್ತ, ಮೆನಸಿನಕಾಯಿ, ಶೇಂಗಾ, ಈರುಳ್ಳಿ, ಹತ್ತಿ ಬೆಳೆಗಳನ್ನು ಪರಿಶೀಲಿಸಿತು.



ಈ ಸಂದರ್ಭದಲ್ಲಿ ಸದಸ್ಯರುಗಳಾದ ಕೇಂದ್ರ ಪಶುಸಂಗೋಪನಾ ಇಲಾಖೆ ನಿರ್ದೇಶಕ ವ್ಹಿ.ಆರ್ ಠಾಕ್ರೆ, ಕೇಂದ್ರ ಗ್ರಾಮೀಣಾಭಿವೃದ್ಧಿ ಇಲಾಖೆಯ ಸಹಾಯಕ ಆಯುಕ್ತ ಮೋತಿ ರಾಮ, ಕಂದಾಯ ಇಲಾಖೆಯ ರಾಜ್ಯ ವಿಪತ್ತು ನಿರ್ವಹಣೆಯ ನಿರ್ದೇಶಕರಾದ ಕರೀಗೌಡ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್ ಮುಂಡರಗಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ಎ.ಎ ಕಂಬಾಳಿಮಠ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟಿಮನಿ, ತಹಸೀಲ್ದಾರರು, ವಿವಿಧ ಇಲಾಖೆ ಅಧಿಕಾರಿಗಳು, ರೈತರು ಉಪಸ್ಥಿತರಿದ್ದರು.

> ಕ್ಷೇತ್ರ ಭೇಟಿಗೂ ಮುನ್ನ ನಗರದ ಪ್ರವಾಸಿ ಮಂದಿರದಲ್ಲಿ ಜಿಲ್ಲೆಯ ಬರದ ವಸ್ತು ಸ್ಥಿತಿ ಬಗ್ಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಕೇಂದ್ರ ಬರ ಅಧ್ಯಯನ ತಂಡಕ್ಕೆ ವಿವರಣೆ ನೀಡಿದರು. ಗದಗ ಜಿಲ್ಲೆಯಲ್ಲಿ ವಾಡಿಕೆ ಮಳೆಗಿಂತ ಕಡಿಮೆ ಮಳೆಯಾಗಿದೆ. ಇದರಿಂದಾಗಿ ಮಳೆಯನ್ನೇ ನೆಚ್ಚಿಕೊಂಡ ರೈತರ ಪರಿಸ್ಥಿತಿ ಅಧೋಗತಿಗೆ ತಲುಪಿದೆ ಎಂದರು.

> ಪ್ರವಾಸಿ ಮಂದಿರದಲ್ಲಿ ಜರುಗಿದ ಸಭೆಯಲ್ಲಿ ತಂಡದ ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಹೆಚ್ಚುವರಿ ಸಲಹೆಗಾರರಾದ ಡಿ.ರಾಜಶೇಖರ, ಕೇಂದ್ರ ಪಶುಸಂಗೋಪನಾ ಇಲಾಖೆ ನಿರ್ದೇಶಕ ವ್ಹಿ.ಆರ್ ಠಾಕ್ರೆ, ಕೇಂದ್ರ ಗ್ರಾಮೀಣಾಭಿವೃದ್ಧಿ ಇಲಾಖೆಯ ಸಹಾಯಕ ಆಯುಕ್ತ ಮೋತಿ ರಾಮ, ಹಾಗೂ ಕಂದಾಯ ಇಲಾಖೆಯ ರಾಜ್ಯ ವಿಪತ್ತು ನಿರ್ವಹಣೆಯ ನಿರ್ದೇಶಕರಾದ ಕರೀಗೌಡ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್ ಮುಂಡರಗಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ಎ.ಎ ಕಂಬಾಳಿಮಠ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟಿಮನಿ, ತಹಸೀಲ್ದಾರರು ಸೇರಿದಂತೆ ವಿವಿಧಿ ಇಲಾಖೆ ಅಧಿಕಾರಿಗಳು ಹಾಜರಿದ್ದರು.

ಜೂನ್‌ನಿಂದ ಸೆಪ್ಟೆಂಬರ್‌ವರೆಗೆ ನೈರುತ್ಯ ಮುಂಗಾರು ಮಳೆಯು ವಾಡಿಕೆ ಮಳೆ 372 ಮೀ.ಮೀ ಆಗಬೇಕಿತ್ತು. ಆದರೆ ವಾಡಿಕೆ ಮಳೆ ಆಗದೇ ಇರುವದರಿಂದ ಬರಗಾಲ ಆವರಿಸಿದೆ. ಜಿಲ್ಲೆಯಲ್ಲಿ ಜೂನ್ ಮಾಹೆಯಲ್ಲಿ ಶೇ 54ರಷ್ಟು ಹಾಗೂ ಅಗಸ್ಟ್‌ನಲ್ಲಿ ಶೇ 62ರಷ್ಟು ಮಳೆ ಕೊರತೆಯಾಗಿದ್ದು, ಬರಗಾಲ ಸಂಪೂರ್ಣವಾಗಿ ಆವರಿಸಿದಂತಾಗಿದೆ. ಗದಗ ಜಿಲ್ಲೆಯ 7 ತಾಲೂಕುಗಳ ಪೈಕಿ ಮುಂಡರಗಿ ಹೊರತುಪಡಿಸಿ ಉಳಿದ ಆರು ತಾಲೂಕುಗಳನ್ನು ಸಹ ರಾಜ್ಯ ಸರ್ಕಾರ ಈಗಾಗಲೇ ತೀವ್ರ ಬರ ಪೀಡಿತ ತಾಲೂಕುಗಳೆಂದು ಘೋಷಿಸಿದೆ.

ಜಿಲ್ಲೆಯ ಆರು ತಾಲೂಕುಗಳಲ್ಲಿ ಒಟ್ಟಾರೆ 62,132 ▸▸3ನೇ ಪುಟಕ್ಕೆ

### ಗಣೇಶ ಮಂಡಳಿಗಳ ಪೂರ್ವಭಾವಿ ಸಭೆಯಲ್ಲಿ ಎಸ್‌ಪಿ ಬಿ.ಎಸ್ ನೇಮಗೌಡ ಸೂಚನೆ

# ಗಣೇಶನ ವಿಸರ್ಜನಾ ಕಾರ್ಯ ಶಾಂತಯುತವಾಗಿರಲಿ



> ಎಲ್ಲರೂ ಸೇರಿ ಇದೊಂದು ಹಬ್ಬ, ಜಾತ್ರೆಯ ರೀತಿಯಲ್ಲಿ ಸಹನೆ, ಶಾಂತಿಯಿಂದ ಯಶಸ್ವಿಗೊಳಿಸುವ ಸಂಪೂರ್ಣ ನಂಬಿಕೆಯನ್ನು ಇಲಾಖೆ ಹೊಂದಿದೆ. ಅದಕ್ಕೆ ವ್ಯತಿರಿಕ್ತವಾಗಿ ನಡೆದುಕೊಳ್ಳುವದನ್ನು ಸಹ ಇಲಾಖೆ ಗಮನಿಸುತ್ತದೆ. ಅಂದು ಮದ್ಯ ಮಾರಾಟವನ್ನು ಸಹ ನಿಷೇಧಿಸಲಾಗಿದ್ದು, ಅಕ್ರಮವಾಗಿ ಎಲ್ಲಿಯಾದರೂ ಮಾರುವದು ಕಂಡುಬಂದಲ್ಲಿ ತಕ್ಷಣ ಅವರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳಲಾಗುವದು.
>
> **– ಬಿ.ಎಸ್ ನೇಮಗೌಡ.**
>
> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣವು ಭಾವೈಕ್ಯತೆಯ ನಾಡಾಗಿದ್ದು, ಇಲ್ಲಿ ಸೌಹಾರ್ದಯುತ ವಾತಾವರಣವಿದೆ. ಈ ನಿಟ್ಟಿನಲ್ಲಿ ಶನಿವಾರ ಮತ್ತು ಸೋಮವಾರ ವಿಸರ್ಜನೆಯಾಗಲಿರುವ ಗಣೇಶನ ಮೂರ್ತಿಯ ಮೆರವಣಿಗೆಯು ಎಲ್ಲರೂ ಮೆಚ್ಚುವಂತೆ ಮತ್ತು ಶಾಂತಿಯುತವಾಗಿ, ಯಾರ ನೆಮ್ಮದಿಗೂ ಧಕ್ಕೆ ಬಾರದಂತೆ ನಡೆದುಕೊಳ್ಳುವಂತೆ ನೆರವೇರಿಸಿ ಪೊಲೀಸರೊಂದಿಗೆ ಸಹಕರಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ ಹೇಳಿದರು.

ಅವರು ಶುಕ್ರವಾರ ಪೊಲೀಸ್ ಠಾಣೆಯಲ್ಲಿ ಗಣೇಶ ಮಂಡಳಿಗಳ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಮಾತನಾಡಿ, ಗಣೇಶ ವಿಸರ್ಜನೆ ವೇಳೆ ಶಾಂತಿ ಸುವ್ಯವಸ್ಥೆಗೆ ಧಕ್ಕೆ ಬರುವಂತೆ ವರ್ತಿಸಬಾರದು. ಹಬ್ಬದ ಆಚರಣೆ ಎಲ್ಲರಿಗೂ ಸಂತಸ ತರುವಂತಿರಬೇಕು. ಬದಲಾಗಿ ಯಾರಿಗೂ ತೊಂದರೆ, ನೋವಾಗುವಂತಾಗಬಾರದು. ಯಾವುದೇ ಸಂಘರ್ಷಕ್ಕೆ ಅವಕಾಶ ಕೊಡದೇ ಪೊಲೀಸರೊಂದಿಗೆ ಸಂಪರ್ಕ ಸಾಧಿಸಿ, ಸಹಕರಿಸಿ. ಗಣೇಶನ ಮಂಡಳಿಯವರು ವಿಸರ್ಜನೆಯ ಪೂರ್ವ ಸಿದ್ಧತೆ ಮಾಡಿಕೊಳ್ಳಿ. ಅದಕ್ಕಾಗಿಯೇ ಸ್ವಯಂಸೇವಕರನ್ನು ನೇಮಿಸಿಕೊಳ್ಳಿ, ನಿಗದಿತ ವೇಳೆಯಲ್ಲಿ ಮೆರವಣಿಗೆ ಪ್ರಾರಂಭಿಸಿದಲ್ಲಿ ಸಾಕಷ್ಟು ಜನರು ವೀಕ್ಷಿಸಲು ಅನೂಕೂಲವಾಗುತ್ತದೆ.

ಸಂಘಟಿಕರಲ್ಲಿ ಹೊಂದಾಣಿ ಕೆಯಿರಲಿ, ಈಗಾಗಲೇ ಪೊಲೀಸ್ ಇಲಾಖೆಯಿಂದ ಸಕಲ ವ್ಯವಸ್ಥೆಯನ್ನು ಮಾಡಿಕೊಳ್ಳಲಾಗಿದ್ದು, ಅವಶ್ಯಕ ಸಿಬ್ಬಂದಿಗಳನ್ನು ಕರೆಸಲಾಗಿದೆ. ಅಲ್ಲದೆ ನಾಕಾಬಂದಿ ಮೂಲಕ ಆಗಮನದ ಮೇಲೆ ವಿಶೇಷ ಗಮನ ಇರಿಸಲಾಗುವದು. ಎಲ್ಲೆಡೆ ವಿಶೇಷ ಕಾವಲು ▸▸3ನೇ ಪುಟಕ್ಕೆ

# ರಾಷ್ಟ್ರೀಯ ವೈರಲ್ ಹೆಪಟೈಟಿಸ್ ನಿಯಂತ್ರಣ ಕಾರ್ಯಕ್ರಮ ದಿನ ಆಚರಣೆ




**■ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚಿನ ದಿನಗಳಲ್ಲಿ ಖಾಯಿಲೆಗಳು ಹೆಚ್ಚಾಗುತ್ತಿದ್ದು ಅದರಲ್ಲಿ ಹೆಪಟೈಟಿಸ್ ಎ, ಬಿ, ಸಿ, ಡಿ ಮತ್ತು ಇ ಖಾಯಿಲೆಗಳು ಒಂದಾಗಿವೆ. ರಾಷ್ಟ್ರೀಯ ಮಟ್ಟದಲ್ಲಿ ತಜ್ಞರು ಇದರ ಬಗ್ಗೆ ಚಿಂತನೆ ಮಾಡಿ ರಾಷ್ಟ್ರೀಯ ವೈರಲ್ ಹೆಪಟೈಟಿಸ್ ನಿಯಂತ್ರಣ ಕಾರ್ಯಕ್ರಮವನ್ನು ಪ್ರಾರಂಭಿಸಿ 2030ರ ವೇಳೆಗೆ ಹೆಪಟೈಟಿಸ್ ಮುಕ್ತ ದೇಶವನ್ನಾಗಿಸುವ ಗುರಿಯನ್ನು ಹೊಂದಿದೆ. ಈ ಖಾಯಿಲೆಗೆ ಚಿಕಿತ್ಸೆ ಪಡೆಯದಿದ್ದರೆ ಕ್ಯಾನ್ಸರ್‌ನಂತಹ ಮಾರಕ ಖಾಯಿಲೆಗೆ ತುತ್ತಾಗಿ ಜೀವ ಕಳೆದುಕೊಳ್ಳುವಂತಹ ಸಾಧ್ಯತೆ ಇರುತ್ತದೆ. ಹೆಪಟೈಟಿಸ್ ಎ, ಮತ್ತು ಇ ಖಾಯಿಲೆಗಳು ಕಲುಷಿತ ಆಹಾರ ಮತ್ತು ನೀರಿನಿಂದ ಹರಡುವ ಖಾಯಿಲೆಯಾಗಿದ್ದು ಹೆಪಟೈಟಿಸ್ ಬಿ, ಸಿ, ಡಿ.ಗಳು ಸೋಂಕು ತಗುಲಿದ ವ್ಯಕ್ತಿಯ ದೇಹದ ರಕ್ತಸ್ರಾವದಿಂದ ಹರಡುತ್ತದೆ. ಹೆಪಟೈಟಿಸ್ ಬಿ ಮತ್ತು ಸಿ ಸೋಂಕುಗಳು ಪಿತ್ತಜನಕಾಂಗದ ಕ್ಯಾನ್ಸರ್‌ಗೆ ಕಾರಣವಾಗುತ್ತದೆ. ಸಾರ್ವಜನಿಕರು ಖಾಯಿಲೆ ಬಗ್ಗೆ ಅತೀ ಜಾಗರೂಕರಾಗಿ ತಮ್ಮ ಆರೋಗ್ಯದ ತಪಾಸಣೆಯನ್ನು ಎಲ್ಲಾ ಜಿಲ್ಲಾ ಆಸ್ಪತ್ರೆ ಮತ್ತು ವೈದ್ಯಕೀಯ ಕಾಲೇಜು ಆಸ್ಪತ್ರೆ ಹಾಗೂ ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ತಪಾಸಣೆ ಹಾಗೂ ಔಷಧೋಪಚಾ ಹಾಗೂ ಮಾಹಿತಿ ಪಡೆದು ತಮ್ಮ ಆರೋಗ್ಯ ಮತ್ತು ಶುಚಿತ್ವದ ಕಡೆಗೆ ಹೆಚ್ಚು ಗಮನ ಹರಿಸಬೇಕಾಗಿದೆ. ▸▸3ನೇ ಪುಟಕ್ಕೆ

# ಜನಪ್ರತಿನಿಧಿಗಳನ್ನು ಹುಡುಕಿಕೊಡುವಂತೆ ಆರಕ್ಷಕರಿಗೆ ಮನವಿ!

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಿರಹಟ್ಟಿ ಮತಕ್ಷೇತ್ರದ ಶಾಸಕ ಡಾ.ಚಂದ್ರು ಲಮಾಣಿ ಅವರನ್ನು ಹುಡುಕಿಕೊಡುವಂತೆ ಪಕ್ಷಾತೀತ ರೈತಪರ ಹೋರಾಟ ವೇದಿಕೆ ಮಹೇಶ ಹೊಗೆಸೊಪ್ಪಿನ ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಮನವಿ ಸಲ್ಲಿಸಿರುವ ಘಟನೆ ನಡೆದಿದೆ.

ಅವರು ಸಲ್ಲಿಸಿರುವ ಮನವಿಯಲ್ಲಿ, ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕು ಬರಗಾಲ ಪೀಡಿತ ಪ್ರದೇಶವೆಂದು ಘೋಷಣೆಯಾಗಿದೆ. ಪರಿಸ್ಥಿತಿ ಅಧ್ಯಯನಕ್ಕಾಗಿ ಶುಕ್ರವಾರ ಕೇಂದ್ರ ಬರಗಾಲ ವೀಕ್ಷಣಾ ತಂಡ ಆಗಮಿಸಿದೆ. ನಮ್ಮ ಕ್ಷೇತ್ರದ



ಶಾಸಕರು ಅಧಿಕಾರಿಗಳೊಂದಿಗೆ ಕ್ಷೇತ್ರವನ್ನು ಸುತ್ತಿ ವಿವರಣೆಯನ್ನು ನೀಡಬೇಕಾಗಿತ್ತು. ಆದರೆ ಶಾಸಕರು ಎಲ್ಲಿದ್ದಾರೆಂದು ಗೊತ್ತಿಲ್ಲದಂತಾಗಿದೆ. ಇದೇ ಪರಿಸ್ಥಿತಿ ಸಂಸದರದ್ದೂ ಆಗಿದೆ. ಆದ್ದರಿಂದ, ಈ ಇಬ್ಬರು ಮಹನೀಯರು ಎಲ್ಲಿರುವರೆಂದು ಪತ್ತೆ ಹಚ್ಚಿ ತಿಳಿಸಬೇಕಾಗಿ ವಿನಂತಿಸಿದ್ದಾರೆ.


ಇದೇ ಉದ್ದೇಶಕ್ಕಾಗಿ, ಶನಿವಾರ ಬೆಳಿಗ್ಗೆ 9 ಗಂಟೆಗೆ ಶಾಸಕರು ಹಾಗೂ ಲೋಕಸಭಾ ಸದಸ್ಯರು ಕಾಣೆಯಾದ ಬಗ್ಗೆ ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಡಲು ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗಿದೆ. ಮೆರವಣಿಗೆಯನ್ನು ಹಾವಳಿ ಹನಮಂತ ದೇವಸ್ಥಾನದಿಂದ ಹೊಸ ಬಸ್‌ಸ್ಟ್ಯಾಂಡ್‌ವರೆಗೆ ನಡೆಸಲಾಗುವುದು ಎಂದು ದೂರಿನಲ್ಲಿ ತಿಳಿಸಿದ್ದಾರೆ. ಈ ಕುರಿತು ಪಿಎಸ್‌ಐ ಯೂಸೆಫ್ ಜಮೂಲಾ ಅವರನ್ನು ಸಂಪರ್ಕಿಸಲಾಗಿ, ಮಹೇಶ ಹೊಗೆಸೊಪ್ಪಿನ ಮನವಿ ಸಲ್ಲಿಸಿದ್ದಾರೆ ಎಂದು ತಿಳಿಸಿದ್ದಾರೆ.

# ರಾಜ್ಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರತಿ ವರ್ಷ ಡಿಸೆಂಬರ್ 3 ರಂದು "ವಿಶ್ವ ವಿಕಲಚೇತನರ ದಿನಾಚರಣೆಯನ್ನು" ಆಚರಿಸಲಾಗುತ್ತದೆ, ಈ ಸಂದರ್ಭದಲ್ಲಿ ಸರ್ಕಾರದ ವತಿಯಿಂದ ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿ, ಸಂಸ್ಥೆ ಮತ್ತು ವಿಶೇಷ ಶಾಲೆಗಳಲ್ಲಿ 15 ವರ್ಷಗಳಿಗೂ ಮೇಲ್ಪಟ್ಟು ಸೇವೆ ಸಲ್ಲಿಸುತ್ತಿರುವ/ಸಲ್ಲಿಸಿರುವ ವಿಶೇಷ ಶಿಕ್ಷಕರಿಗೆ ಪ್ರತಿ ವರ್ಷವೂ ರಾಜ್ಯ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ 2023ನೇ ಸಾಲಿನಲ್ಲಿ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 30 ರೊಳಗಾಗಿ ದಾಖಲಾತಿಗಳನ್ನು ಕೇಂದ್ರ ಕಚೇರಿಗೆ ಸಲ್ಲಿಸಬೇಕಾಗಿರುವುದರಿಂದ, ಜಿಲ್ಲಾ ವ್ಯಾಪ್ತಿಯ ಅರ್ಹ ವಿಕಲಚೇತನರ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿರುವ ವ್ಯಕ್ತಿ, ಸಂಸ್ಥೆ ಮತ್ತು ವಿಶೇಷ ಶಾಲೆಗಳ ಶಿಕ್ಷಕರುಗಳು ನಿಗದಿತ ಅರ್ಜಿ ನಮೂನೆಗಳನ್ನು ಇಲಾಖೆಯ ವೆಬ್‌ಸೈಟ್ www.dwdsc.kar.nic.in ಇಲ್ಲಿ ಪಡೆದು ನಿಗದಿತ ನಮೂನೆಯಲ್ಲಿ ಮಾಹಿತಿಯನ್ನು ಭರ್ತಿ ಮಾಡಿ ಅಗತ್ಯ ಮೂಲ ದಾಖಲಾತಿಗಳೊಂದಿಗೆ ಅಕ್ಟೋಬರ್ 25 ರೊಳಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಾರ್ಯಾಲಯ, ಗದಗ ಕೊಠಡಿ ಸಂಖ್ಯೆ:29 ಇಲ್ಲಿಗೆ ದ್ವಿಪ್ರತಿಯಲ್ಲಿ ಪ್ರಸ್ತಾವನೆಯನ್ನು ▸▸3 ನೇ ಪುಟಕ್ಕೆ

# ಗದಗ-ಬೆಟಗೇರಿ ಅವಳಿ ನಗರದಲ್ಲಿ ಇಂದು ನೀರು ಪೂರೈಕೆ ಎಲ್ಲೆಲ್ಲಿ?



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಬೆಟಗೇರಿ ಅವಳಿ ನಗರದಲ್ಲಿ ಅಕ್ಟೋಬರ್ 7 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ:** ವಾರ್ಡ್ ನಂ. 24, 21 ಮೆರವಾಡೆ ಲೈನ್, ಚನ್ನಪ್ಪ ಲೈನ್, ಹಳೆ ಲೈನ್ ಹೊಸ ಲೈನ್, ಹಿರೇಮಠದವರ ಲೈನ್, ರಾಮದಾಸ್ ಲೈನ್, ಗೋಮಾಳ ಲೈನ್, ಗುಳಗುಂದಿ ಲೈನ್, ಭೂಮಾ ಲೈನ್, ಮುನವಳ್ಳಿ ಪ್ಲಾಟ್, ಅಕ್ಕಿ ಪ್ಲಾಟ್, ಕಮತರ ಪ್ಲಾಟ್ ಕೆಲವು ಭಾಗಗಳು. ವಾರ್ಡ್ ನಂ.29 ಭಾಂಡಗೆ ಲೈನ್, ಡಂಬಳ ರವರ ಲೈನ್, ವಾರ್ಡ್ ನಂ. 14 ಹಣಗಿ ಜೀನ್ ಭಾಗ 1 ಭಾಗ 2, ಕುರುಡಗಿ ಯವರ ಲೈನ್, ಗೌಡ್ರು ಲೈನ್, ಮುಂಡರಗಿ ಲೈನ್, ಮಣಿಕಂಠ ವಕೀಲರ ಲೈನ್, ಬಿಕೆ ಮಾಸ್ತರ್ ಲೈನ್, ಕಾಮಾಜಿಯವರ ಲೈನ್, ಹೊಸ ಅಂಗಡಿ ಲೈನ್, ಹೊಸ ಮನೆ ಲೈನ್, ಕಟ್ಟಿಮನಿ ಲೈನ್, ಮುದಗಲ್ ಲೈನ್, ಅಂಗಡಿ ವಕೀಲರ ಲೈನ್, ಗುಗ್ಗರಿ ಅವರ ಲೈನ್, ವಾರ್ಡ್ ನಂ.13 ಹಾದಿಮನಿ ವಕೀಲರ ಲೈನ್, ಮಠದ ವಕೀಲರ ಲೈನ್, ಪವಾಡಶೆಟ್ಟರ ಲೈನ್, ಶಿರೋಳ ರವರ ಲೈನ್, ಸೋನಿಯಾರ ಲೈನ್, ವಿಜಯ ಶೆಟ್ಟರ್ ಲೈನ್, ಕೆ ಸಿ ರಾಣಿ ರೋಡ್, ಪತ್ತೆಪುರ ಲೈನ್, ಹೆಡ್ ಪೋಸ್ಟ್ ಲೈನ್, ಕಾರಂತರ ಲೈನ್, ವಕೀಲ ಗೌಸ್ ಬಿಲ್ಡಿಂಗ್ ಕೆಲವು ಭಾಗಗಳು. ವಾರ್ಡ್ ನಂ. 24,17,18,19 ಅಂಬೇಡ್ಕರ್ ನಗರ, ಮಡಿವಾಳ ದೇವಸ್ಥಾನ, ಕುಂಬಾರ ಓಣಿ, ಬಾಗಲಕೋಟಿಯವರ ಲೈನ್, ಕೊನೇರಿ ಹೊಂಡಲೈನ್, ಹನುಮಂತ ದೇವರ ಗುಡಿ ಲೈನ್, ನಾಲ್ವಡದವರ ಓಣಿ,

ವಾರ್ಡ್ ನಂ. 7 ಪೆಂಡಾರ ಓಣಿ, ಮಲ್ಲೇಶಪ್ಪ ಲೈನ್, ನಂದರಗಿ ಲೈನ್, ಘಜ್ಜಿಯವರ ಲೈನ್, ಬಚ್ಚಲಕ್ಕಮ್ಮನ ಗುಡಿ ಲೈನ್, ಗೌಡ್ರು ಓಣಿ, ಚನ್ನಗೌಡ್ರು ಲೈನ್ ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೇಂದ್ರದ ಬರ ಅಧ್ಯಯನದ ವೇಳೆ ನಾಪತ್ತೆಯಾದ ಕ್ಷೇತ್ರದ ಜನಪ್ರತಿನಿಧಿಗಳು

# ಪರಿಸ್ಥಿತಿ ನಿಭಾಯಿಸಿ ರೈತರಿಗೆ ನ್ಯಾಯ ಒದಗಿಸಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನಲ್ಲುಂಟಾದ ಬರ ಪರಿಸ್ಥಿತಿ ಅರಿಯಲು ಶುಕ್ರವಾರ ಕೇಂದ್ರ ಸರ್ಕಾರದ ಬರ ಅಧ್ಯಯನ ತಂಡ ಆಗಮಿಸಿದ ವೇಳೆ ಕ್ಷೇತ್ರದ ಶಾಸಕರ ಅನುಪಸ್ಥಿತಿಗೆ ರೈತ ಸಂಘಟನೆಯ ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು.

> ವಸ್ತುಸ್ಥಿತಿಯ ಅಧ್ಯಯನಕ್ಕೆ ಬಂದ ಅಧಿಕಾರಿಗಳು ಸಮಾಧಾನದಿಂದ ರೈತರ ಕಷ್ಟ ಕೇಳಲಿಲ್ಲ. 'ಬಂದ ಪುಟ್ಟ ಹೋದ ಪುಟ್ಟ' ಎಂಬಂತೆ ಅಧಿಕಾರಿಗಳ ತಂಡ ಬಂದು ಹೋಗಿದೆ. ಇದನ್ನು ಕ್ಷೇತ್ರದ ಜನಪ್ರತಿನಿಧಿಗಳು, ಅಧಿಕಾರಿಗಳು ಅತ್ಯಂತ ಜಾಣ್ಮೆಯಿಂದ ನಿಭಾಯಿಸಿ ರೈತರಿಗೆ ನ್ಯಾಯ ಒದಗಿಸಬೇಕು. ಇಲ್ಲದಿದ್ದರೆ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

ಪಕ್ಷಾತೀತ ರೈತಪರ ಹೋರಾಟ ವೇದಿಕೆಯ ಅಧ್ಯಕ್ಷ ಮಹೇಶ ಹೊಗೆಸೊಪ್ಪಿನ ಮಾತನಾಡಿ, ನಮ್ಮ ಶಾಸಕರು ವಿದ್ಯಾವಂತರಿದ್ದಾರೆ, ರೈತರು, ಬಡವರ ಬಗ್ಗೆ ಕಳಕಳಿಯಿದೆ. ಹಿಂದುಳಿದಿರುವ ಕ್ಷೇತ್ರದ ಅಭಿವೃದ್ಧಿಯ ಕನಸು ಹೊಂದಿದ್ದಾರೆ ಎಂಬ ಸದುದ್ದೇಶದಿಂದ ಕ್ಷೇತ್ರದ ಜನತೆ ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸಿದ್ದಾರೆ. ಆದರೆ, ಶಾಸಕರು ಕೇಂದ್ರದ ಅಧಿಕಾರಿಗಳ ತಂಡ ಕ್ಷೇತ್ರಕ್ಕೆ ಆಗಮಿಸಿದಾಗಲೂ ಉಪಸ್ಥಿತರಿಲ್ಲದಿರುವುದು ಜನರ ನಿರೀಕ್ಷೆಯನ್ನು ಹುಸಿಯಾಗಿಸಿದೆ. ಕೇಂದ್ರದಿಂದ ಆಗಮಿಸಿದ ಅಧಿಕಾರಿಗಳಿಗೆ ಕನ್ನಡ ಭಾಷೆ ತಿಳಿಯುವುದಿಲ್ಲ.

ರೈತರಿಗೆ ಕನ್ನಡ ಬಿಟ್ಟು ಬೇರೆ ಭಾಷೆ ಬರುವುದಿಲ್ಲ. ಈ ವೇಳೆ ಇಂಗ್ಲೀಷ್, ಹಿಂದಿ ಇತರೆ ಭಾಷೆ ಬಲ್ಲ ಶಾಸಕರು ಹಾಜರಿದ್ದು ರೈತರ ಕಷ್ಟ-ನಷ್ಟಗಳನ್ನು ಕೇಂದ್ರದ ಅಧಿಕಾರಿಗಳಿಗೆ ▸▸3ನೇ ಪುಟಕ್ಕೆ

## ಸಾಕ್ಷಿ ಸುಭಾಷಿತ

ನಮ್ಮ ಅಂತರಂಗದ ಪುಸ್ತಕ ತೆರೆಯುವ ತನಕ,
ಉಳಿದೆಲ್ಲ ಪುಸ್ತಕಗಳು ಉಪಯೋಗಕ್ಕೆ ಬಾರವು
–ಸ್ವಾಮಿ ವಿವೇಕಾನಂದ

## ಸಂಪಾದಕೀಯ

### ಹಿಂದುಳಿದ ವರ್ಗದವರಿಗೆ ರಾಜಕೀಯ ಬಲ

ನ್ಯಾಯಮೂರ್ತಿ ಭಕ್ತವತ್ಸಲ ಆಯೋಗದ ಶಿಫಾರಸ್ಸುಗಳನ್ನು ಕರ್ನಾಟಕ ಸರ್ಕಾರ ಅಂಗೀಕರಿಸುವ ಮೂಲಕ ಹಿಂದುಳಿದ ವರ್ಗದ ಜನರಿಗೆ ರಾಜಕೀಯ ಶಕ್ತಿ ಕಲ್ಪಿಸಿಕೊಟ್ಟಿದೆ.

ಭಕ್ತವತ್ಸಲ ಆಯೋಗದ ಶಿಫಾರಸಿನಂತೆ ಸ್ಥಳೀಯ ಸಂಸ್ಥೆಯ ಚುನಾವಣೆಯಲ್ಲಿ ಹಿಂದುಳಿದ ವರ್ಗದವರಿಗೆ ಶೇಕಡಾ 33ರಷ್ಟು ಮೀಸಲಾತಿಯನ್ನು ನೀಡಲು ಸಚಿವ ಸಂಪುಟ ಗುರುವಾರ ಒಪ್ಪಿಗೆ ನೀಡಿದೆ.

ಸ್ಥಳೀಯ ಸಂಸ್ಥೆಗಳಲ್ಲೂ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸುವ ಸಂಬಂಧ ಸುಪ್ರೀಂ ಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ರಚಿಸಲಾಗಿದ್ದ ಆಯೋಗ ಐದು ಪ್ರಮುಖ ಶಿಫಾರಸುಗಳನ್ನ ಮಾಡಿತ್ತು.

ಆದರೆ ಸಚಿವ ಸಂಪುಟ ಸ್ಥಳೀಯ ಸಂಸ್ಥೆಗಳಲ್ಲಿ ಮೀಸಲಾತಿ, ಮೇಯರ್ ಮತ್ತು ಉಪಮೇಯರಗಳ ಅಧಿಕಾರ ಅವಧಿಯನ್ನು ಹೆಚ್ಚಿಸುವುದು ಸೇರಿದಂತೆ ಒಟ್ಟು ಮೂರು ಪ್ರಮುಖ ನಿರ್ಧಾರಗಳನ್ನು ಅಂಗೀಕರಿಸಿ, ಇನ್ನೆರಡು ಶಿಫಾರಸುಗಳನ್ನು ತಿರಸ್ಕರಿಸಿದೆ.

ನ್ಯಾಯಮೂರ್ತಿ ಭಕ್ತವತ್ಸಲ ಆಯೋಗದ ವರದಿಯ ಅಂಗೀಕಾರದಿಂದ ಭವಿಷ್ಯದಲ್ಲಿ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಓಬಿಸಿ ವರ್ಗದವರಿಗೂ ರಾಜಕೀಯ ಪ್ರಾತಿನಿಧ್ಯ ದೊರೆಯಲಿದೆ. ಅದರಲ್ಲೂ ಮಹಾನಗರ ಪಾಲಿಕೆ, ನಗರಸಭೆ ಆಡಳಿತ ವ್ಯವಸ್ಥೆಯಲ್ಲಿ ಒಬಿಸಿ ವರ್ಗದವರು ಸಕ್ರಿಯವಾಗಿ ಪಾಲ್ಗೊಳ್ಳಲು ಸಾಧ್ಯವಾಗಲಿದೆ.

ದಲಿತ, ಅಲ್ಪಸಂಖ್ಯಾತ ಮತ್ತು ಹಿಂದುಳಿದ ವರ್ಗದ ಸಮುದಾಯದ ಬಲದಿಂದ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರಕಾರ, ಆಯಾ ಸಮುದಾಯಗಳಿಗೆ ರಾಜಕೀಯ ಬಲ ತುಂಬುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇಟ್ಟಿರುವುದು ಸ್ವಾಗತಾರ್ಹ.

## ಅಕ್ಟೋಬರ್ 2ರಿಂದ 8ರವರೆಗೆ-ರಾಷ್ಟ್ರೀಯ ವನ್ಯಜೀವಿ ಸಪ್ತಾಹದ ನಿಮಿತ್ತ ವಿಶೇಷ ಲೇಖನ

# ವನ್ಯಜೀವಿಗಳ ಅಳಿವು-ಉಳಿವು ನಮ್ಮ ಕೈಯಲ್ಲಿ



"ವನ್ಯಜೀವಿಗಳನ್ನು ಮನುಷ್ಯನು ನಿರ್ಮಿಸಲು ಸಾಧ್ಯವಿಲ್ಲ. ಅದು ಒಮ್ಮೆ ಹೋದರೆ, ಅದು ಶಾಶ್ವತವಾಗಿ ಹೋಗುತ್ತದೆ." ಎಂದು-ಜಾಯ್ ಆಡಮ್ಸನ್ ಹೇಳಿದ್ದು ಅಕ್ಷರಶಃ ಸತ್ಯವಾದ ಮಾತು. ನಾವು ಪ್ರಾಣಿಗಳನ್ನು ಮತ್ತು ವನ್ಯಜೀವಿಗಳನ್ನು ಪ್ರೀತಿಸಬೇಕು ಹಾಗೂ ಸಂರಕ್ಷಿಸಬೇಕು. ಏಕೆಂದರೆ ಅವು ಭೂಮಿಯ ಮೇಲಿನ ನಿಜವಾದ ಚಿನ್ನ. ಚಿನ್ನ ಮುಗಿದು ಹೋಗುವ ಸಂಪನ್ಮೂಲ. ಅಂತೆಯೇ ವನ್ಯಜೀವಿಗಳು ಸಹ ವಿನಾಶದ ಅಂಚಿನಲ್ಲಿರುವ ಅಪರೂಪದ ಪ್ರಾಣಿಗಳು. ಹೀಗಾಗಿ ವನ್ಯಜೀವಿಗಳಿಲ್ಲದೆ ಮನುಷ್ಯರು ತಮ್ಮನ್ನು ತಾವು ಉಳಿಸಿಕೊಳ್ಳಲು ಸಾಧ್ಯವಿಲ್ಲ. ಆದ್ದರಿಂದ ಎಲ್ಲರೂ ವನ್ಯಜೀವಿಗಳ ಮಹತ್ವವನ್ನು ಒಪ್ಪಿಕೊಳ್ಳಬೇಕು.

ಹಿಂದಿನ ಶಿಲಾಯುಗದ ಕಾಲದಲ್ಲಿ ಮನುಷ್ಯರು ಮತ್ತು ಬೇಟೆಗಾರರು ವನ್ಯಜೀವನದೊಂದಿಗೆ ಮಿಳಿತಗೊಂಡಿದ್ದರು. ಅಂದಿನ ಕಾಲಕ್ಕೆ ಪ್ರಾಣಿಗಳು ಮತ್ತು ಸಸ್ಯ ಸಂಬಂಧಿ ಗೆಡ್ಡೆ-ಗೆಣಸುಗಳು ಅವರ ಆಹಾರವಾಗಿದ್ದವು. ಬಹಳ ವರ್ಷಗಳ ಹಿಂದೆ ಮಾನವನ ಬೇಟೆಗೆ ಸಿಲುಕಿದ ಅನೇಕ ತಳಿಗಳು ಈಗ ನಿರ್ನಾಮವಾಗಿವೆ. ಇಂದಿಗೂ ಕೂಡ ಪ್ರಪಂಚದ ಕೆಲವು ಭಾಗಗಳಲ್ಲಿ ವನ್ಯಜೀವಿ ಸಾಕಣೆ, ಬೇಟೆಗಾರಿಕೆ ಹಾಗೂ ಮೀನುಗಾರಿಕೆ ಇವು ಆಹಾರದ ಮೂಲಗಳಾಗಿವೆ. ಹಾಗೆಯೇ ಪ್ರಪಂಚದ ಇನ್ನಿತರ ಪದೇಶಗಳಲ್ಲಿ ಕಂಡು ಬರುವಂತೆ ಬೇಟೆಗಾರಿಕೆ ಮತು ವಾಣಿಜ್ಯೇತರ ಮೀನುಗಾರಿಕೆಯು ಮುಖ್ಯವಾಗಿ ಕ್ರೀಡೆ ಅಥವಾ ಮನೋರಂಜನೆಯಾಗಿ ಬದಲಾವಣೆಯಾಗಿದೆ.

ಒಂದು ಜೀವಿಯು ತನ್ನ ಆವಾಸದಲ್ಲಿ ಸ್ವಾಭಾವಿಕವಾಗಿ ಬೆಳೆಯುವ ತಾಣದಲ್ಲಿ ತಾನೇ ತಾನಾಗಿ ಬೆಳೆಯುತ್ತದೆಯೋ ಅದರ ಬೆಳವಣಿಗೆ, ಜೀವನ ಹಾಗೂ ಸಂತಾನೋತ್ಪತ್ತಿಗೆ ಮಾನವನ ಸಹಾಯ ಬೇಡವೋ ಅಂತಹ ಪ್ರಾಣಿ-ಸಸ್ಯಗಳು ವನ್ಯಜೀವಿಗಳು ಎಂದು ಕರೆಯಲಾಗುತ್ತದೆ. ಉದಾಹರಣೆಗೆ ಕಾಡಿನಲ್ಲಿರುವ ಸಿಂಹ, ಆನೆ, ಹುಲಿ, ಚಿರತೆ, ಕರಡಿ ಮತ್ತು ಇನ್ನಿತರ ಪ್ರಾಣಿಗಳಾಗಿವೆ. ಇವುಗಳ ಜೀವನ ಮನುಷ್ಯರ ಮೇಲೆ ಅವಲಂಬಿತವಾಗಿಲ್ಲ. ಇವು ಸ್ವಾಭಾವಿಕವಾಗಿ ವಿಕಾಸವಾದದ ಹಂದರದಲ್ಲಿ ಬೆಳೆದುಕೊಂಡು ಬಂದಿರುತ್ತವೆ.

ಇಂದು ಅರಣ್ಯದಲ್ಲಿ ರೆಸಾರ್ಟ್ ನಿರ್ಮಿಸಿ ಪ್ರವಾಸೋದ್ಯಮ ಬೆಳೆಸುವುದೇ ಅಭಿವೃದ್ಧಿ ಎನ್ನುವಂತಾಗಿದೆ. ಅರಣ್ಯ ಪ್ರದೇಶ ದಿನೇ ದಿನೇ ಸಂಕುಚಿತವಾಗುತ್ತಿದೆ. ಕೈಗಾರಿಕೆ, ನಗರೀಕರಣ, ಆರ್ಥಿಕ ಪ್ರಗತಿಯಿಂದ ಕಾಡಿನ ಮೇಲೆ ಒತ್ತಡ ಹೆಚ್ಚಾಗುತ್ತಿದೆ. ಮುಖ್ಯವಾಗಿ ಪ್ರಾಣಿಗಳಿಗೆ ಆಹಾರ, ನೀರು ಮತ್ತು ಸಂತಾನ ಅಭಿವೃದ್ಧಿಗೆ ಸ್ಥಳಬೇಕು. ಆದರೆ, ಅರಣ್ಯ ಪ್ರದೇಶ ಸಂಕುಚಿತವಾಗುತ್ತಿರುವುದೇ ದೊಡ್ಡ ಸಮಸ್ಯೆ. ಒಂದು ಕಾಡಿಗೂ ಇನ್ನೊಂದು ಕಾಡಿಗೂ ಸಂಪರ್ಕವೇ ಇಲ್ಲದಂತಾಗುತ್ತಿದೆ. ಮಾನವನ ಮಿತಿಮೀರಿದ ಬೇಟೆಯಾಡುವಿಕೆಯಿಂದ ಮತ್ತು ಕಾಡು ಕಡಿಯುವುದರಿಂದ ಪರಿಸರದಲ್ಲಿ ವನ್ಯಜೀವಿಗಳ ನಡುವೆ ಸಂಘರ್ಷ ಉಂಟಾಗಿ ಅವು ನಾಡಿಗೆ ಬರುತ್ತಿವೆ.

1972ರ ದಶಕದಲ್ಲಿ ಪ್ರಾರಂಭವಾದ ಹಲವು ವನ್ಯಜೀವಿ ಸಂರಕ್ಷಣಾ ಕಾರ್ಯಕ್ರಮಗಳು ಕರ್ನಾಟಕದಲ್ಲೂ ಹಲವಾರು ಸಕಾರಾತ್ಮಕ ಪರಿಣಾಮಗಳನ್ನು ತಂದವು. ಬಂಡೀಪುರ, ನಾಗರಹೊಳೆ, ಭದ್ರಾ, ಭೀಮಗಡ, ದಾಂಡೇಲಿ ವನ್ಯಜೀವಿ ಅಭಯಾರಣ್ಯ, ಜಯಮಂಗಲಿ ಬ್ಲಾಕ್‌ಬಕ್ ಕಾವೇರಿ ವನ್ಯಜೀವಿ ಅಭಯಾರಣ್ಯ ಮತ್ತು ಬ್ರಹ್ಮಗಿರಿ ವನ್ಯಜೀವಿ ಅಭಯಾರಣ್ಯಗಳು ಕರ್ನಾಟಕದ ಅತ್ಯಂತ ಜನಪ್ರಿಯ ವನ್ಯಜೀವಿ ಸ್ವರ್ಗಗಳಾಗಿವೆ.

ವನ್ಯಜೀವಿಗಳ ಸಂರಕ್ಷಣೆಯ ಇಷ್ಟೆಲ್ಲಾ ಪ್ರಯತ್ನಗಳ ನಡುವೆಯೂ ನಾವು ಕೆಲ ಹಿನ್ನಡೆ ಕಂಡಿದ್ದೇವೆ. ರಾಜ್ಯದ ಬಂಡೀಪುರದ ಬಳಿಯಿರುವ ಬೀರಂಬಾಡಿ, ಚಾಮರಾಜನಗರ ತಾಲ್ಲೂಕಿನ ಅತ್ತಿಕಲ್ ಪುರ, ಕೊಳ್ಳೇಗಾಲ ತಾಲ್ಲೂಕಿನ ಬಂಡಳ್ಳಿ, ಬಳ್ಳಾರಿಯ ಕೆಲ ಭಾಗ ಮತ್ತು ಚಿಕ್ಕಬಳ್ಳಾಪುರದಲ್ಲಿ ಸಹ ಕಂಡು ಬರುತ್ತಿದ್ದ 'ಸಿವಂಗಿ ಅಥವಾ ಬೇಟೆ ಚಿರತೆ' ಕರ್ನಾಟಕ ಏಕೀಕರಣಕ್ಕೂ ಮುನ್ನವೇ ಕಣ್ಮರೆಯಾಯಿತು.

ಈ ಶತಮಾನದ ಆದಿಭಾಗದಲ್ಲಿ ಕೊಡಗಿನ ಬ್ರಹ್ಮಗಿರಿ ಬೆಟ್ಟಗಳಲ್ಲಿ ನೀಲಗಿರಿ ಥಾರ್ ಸಹ ಇತ್ತೆಂದು ಭಾವಿಸಲಾಗಿದೆ. ಇವು ನಾವು ತಿಳಿದಿರುವ ಹಾಗೆ ಕಳೆದುಕೊಂಡಿರುವ ವನ್ಯಜೀವಿ ಪ್ರಭೇದಗಳು ಎಂದು ಹೇಳಬಹುದು. ನಮಗೆ ತಿಳಿಯದೆ ಹಲವು ಪಕ್ಷಿ, ಉರಗ, ಕಪ್ಪೆ, ಮೀನು ಮತ್ತಿತರ ಪ್ರಭೇಧಗಳು ನಮ್ಮ ಗಮನಕ್ಕೆ ಬರದೇ ನಶಿಸಿ ಹೋಗಿರುವ ಸಾಧ್ಯತೆಗಳಿವೆ.

ಒಟ್ಟಾರೆಯಾಗಿ ವನ್ಯ ಜೀವಿಗಳಿಗೂ ಮನುಷ್ಯರಂತೆ ಬದುಕುವ ಸ್ವಾತಂತ್ರವಿದೆ. ಅವುಗಳ ಆಯಸ್ಸು ಮನುಷ್ಯನ ಕೈಯಲ್ಲಿದೆ. ಅವುಗಳನ್ನು ಬದುಕಲು ಬಿಡಿ. ಪ್ರಾಣಿ-ಪಕ್ಷಿಗಳನ್ನು ರಕ್ಷಣೆ ಮಾಡುವುದರಿಂದ ಪರಿಸರ ರಕ್ಷಣೆಯಾಗುತ್ತದೆ. ಇದರ ಬಗ್ಗೆ ಅರಿವು ಮೂಡಿಸುವುದು ಅಗತ್ಯ. ವನ್ಯಜೀವಿಗಳಿಲ್ಲದೆ ಮನುಷ್ಯರು ತಮ್ಮನ್ನು ತಾವು ಉಳಿಸಿಕೊಳ್ಳಲು ಸಾಧ್ಯವಿಲ್ಲ.



– ಬಸವರಾಜ ಎಮ್.ಯರಗುಪ್ಪಿ.
ಬಿಆರ್‌ಪಿ,
ಶಿರಹಟ್ಟಿ- ಲಕ್ಷ್ಮೇಶ್ವರ.

## ವಿಧಾನಸೌಧದಿಂದ 1 ಕಿಲೋಮೀಟರ್ ಅಂತರದಲ್ಲಿ ಬಸ್ ನಿಲ್ದಾಣವನ್ನೇ ಹೊತ್ತೊಯ್ದ ಖದೀಮರು!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರಿನಲ್ಲಿ ಖದೀಮರ ಸಂಖ್ಯೆ ಹೆಚ್ಚಾಗುತ್ತಿದ್ದು, ಸಾರ್ವಜನಿಕರ ಬೆಲೆಬಾಳುವ ವಸ್ತುಗಳಿಗೆ ಕೈ ಹಾಕುತ್ತಿದ್ದ ಕಳ್ಳರು ಇದೀಗ ಬಸ್ ಶೆಲ್ಟರ್ (ಬಸ್ ತಂಗುದಾಣ) ಅನ್ನೇ ಕದ್ದು ಪರಾರಿಯಾಗಿರುವ ಘಟನೆ ವರದಿಯಾಗಿದೆ.

ಕನ್ನಿಂಗ್ ಹ್ಯಾಮ್ ರಸ್ತೆಯಲ್ಲಿ 10 ಲಕ್ಷ ರೂಪಾಯಿ ವೆಚ್ಚದಲ್ಲಿ ಸ್ಟೇನ್‌ಲೆಸ್ ಸ್ಟೀಲ್ ರಚನೆಯಿಂದ ಭದ್ರವಾಗಿದ್ದ ಹೊಚ್ಚಹೊಸ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ) ಬಸ್ ಶೆಲ್ಟರ್ ಅನ್ನು ಕದೀಮರು ಕಳ್ಳತನ ಮಾಡಿದ್ದಾರೆ.

ಈ ಸಂಬಂಧ ತಂಗುದಾಣ ನಿರ್ಮಾಣ ಮಾಡಿದ್ದ ಖಾಸಗಿ ಸಂಸ್ಥೆಯ ಉಪಾಧ್ಯಕ್ಷ ಎನ್ ರವಿ ರೆಡ್ಡಿ ಎಂಬುವರು ಈ ಬಗ್ಗೆ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

## ಜಿಲ್ಲಾ ಮಟ್ಟದ 'ಸಂಸ್ಕೃತ ಶ್ರಾವಣೀ' ಸಮಾರೋಪ



■ ವಿಜಯಸಾಕ್ಷಿ ಸುದ್ದಿ, ಗದಗ

'ಸಂಸ್ಕೃತ ಶ್ರಾವಣೀ' ನಿಮಿತ್ತ ಜಿಲ್ಲೆಯ ಸಂಸ್ಕೃತ ವಿದ್ಯಾರ್ಥಿಗಳಿಗೆ ಸುಭಾಷಿತ, ಭಗವದ್ಗೀತಾ ಹಾಗೂ ಪ್ರಬಂಧ ಸ್ಪರ್ಧಾ ಹಾಗೂ 2022-23ನೇ ಸಾಲಿನ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಶ್ರೀ ಜಗದ್ಗುರು ಪಂಚಾಚಾರ್ಯ ವೇದ ಸಂಸ್ಕೃತ ಪಾಠಶಾಲೆಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಧಾರವಾಡ ವಲಯ ವಿಷಯ ಪರಿವೀಕ್ಷಕ ವಿ. ಜಿ.ಎಸ್ ಗಾಂವಕರ ಪ್ರಾಸ್ತಾವಿಕವಾಗಿ ಮಾತನಾಡಿ, ಸಂಸ್ಕೃತ ಶ್ರಾವಣೀ ಎಂಬುದನ್ನು ಪರಿಚಯಿಸಿದ್ದೇ ಗದಗ ಜಿಲ್ಲಾ ಶಿಕ್ಷಕರ ಸಂಘ. ಶ್ರಾವಣ ಶುಕ್ಲ ಪೂರ್ಣಿಮೆಯಿಂದ ಭಾದ್ರಪದ ಶುಕ್ಲ ಪೂರ್ಣಿಮೆಯವರೆಗೆ ಒಂದು ತಿಂಗಳ ಕಾಲ ಸಂಸ್ಕೃತ ಭಾಷಾ ಬೆಳವಣಿಗೆ ಹಾಗೂ ಪ್ರಚಾರ ಮಾಡಲಾಗುವುದು ಎಂದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಶ್ರೀ ಷ.ಬ್ರ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಸನಾತನ ಕಾಲದಿಂದಲೂ ಸಂಸ್ಕೃತ ಭಾಷೆಯು ತನ್ನ ಹಿರಿಮೆಯನ್ನು ಉಳಿಸಿಕೊಂಡಿದೆ. ಪ್ರತಿಯೊಬ್ಬರೂ ಸುಲಭ ರೀತಿಯಲ್ಲಿ ಕಲಿಯಬಹುದಾದ ಭಾಷೆ ಸಂಸ್ಕೃತ ಮಾತ್ರ ಎಂದರು.

ಸಿದ್ದಲಿಂಗಪ್ಪ ಚ.ಚಳಗೇರಿ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಪಾಲ್ಗೊಂಡ ಕರ್ನಾಟಕ ಸಂಸ್ಕೃತ ಪಾಠಶಾಲಾ ಶಿಕ್ಷಕರ ಸಂಘದ ಗೌರವಾಧ್ಯಕ್ಷ ವಿ. ಆರ್.ಟಿ ಭಟ್, ಧಾರವಾಡ ವಲಯ ಸಂಯೋಜಕರಾದ ವಿ ಬಿ.ಬಿ ಆರೇರ, ಗದಗ ಜಿಲ್ಲಾ ಸಂಸ್ಕೃತ ಶಿಕ್ಷಕರ ಸಂಘದ ಅಧ್ಯಕ್ಷ ಎಚ್. ಎನ್ ಭಜಂತ್ರಿ ಪಾಲ್ಗೊಂಡಿದ್ದರು.

ವಿ. ಗುರುಸಿದ್ಧಯ್ಯ ಹಿರೇಮಠ ಸ್ವಾಗತ ನುಡಿಗಳನ್ನಾಡಿದರು. ವಿ. ಕಿರಣ ಜೋಶಿ ಕಾರ್ಯಕ್ರಮ ನಿರೂಪಿಸಿದರು. ಜಿ.ಎಮ್ ಪಲ್ಲೇದ ವಂದಿಸಿದರು.

## ಸ್ಕೌಟ್ಸ್-ಗೈಡ್ಸ್ ವಿದ್ಯಾರ್ಥಿಗಳಿಂದ 'ಸರ್ವಧರ್ಮ ಸಮನ್ವಯ ಪ್ರಾರ್ಥನೆ'



■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಿಲ್ಲಾ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯಿಂದ ಮಹಾತ್ಮ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನಾಚರಣೆಯ ನಿಮಿತ್ತ ಸ್ಕೌಟ್ಸ್-ಗೈಡ್ಸ್ ವಿದ್ಯಾರ್ಥಿಗಳಿಂದ 'ಸರ್ವಧರ್ಮ ಸಮನ್ವಯ ಪ್ರಾರ್ಥನೆ' ಕಾರ್ಯಕ್ರಮವು ತಾಲೂಕಿನ ಕಿನ್ನಾಳ ಗ್ರಾಮದ ಕುವೆಂಪು ಶತಮಾನೋತ್ಸವ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜರುಗಿತು.

ಕಿನ್ನಾಳ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರಾದ ಕವಿತಾ ಅವರು, ಆರೋಗ್ಯದ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು.

ಮಕ್ಕಳ ಸಹಾಯವಾಣಿ ತಜ್ಞರಾದ ಸಿಂಧು ಅವರು ಮತನಾಡಿ, ಯಾವುದೇ ಸಂದರ್ಭದಲ್ಲಿ ಮಕ್ಕಳು ಸಹಾಯವಾಣಿಗೆ ಕರೆ ಮಾಡಿ ಸಹಾಯ ಪಡೆದುಕೊಳ್ಳಬೇಕು ಎಂದರು. ಲಲಿತಾ ಹಿರೇಮಠ ಅವರು ವಿದ್ಯಾರ್ಥಿನಿಯರ ಹದಿಹರೆಯದ ವಯಸ್ಸಿನ ಕುರಿತು ಮಾಹಿತಿ ನೀಡಿದರು. ಜಿಲ್ಲಾ ಕಾರ್ಯದರ್ಶಿ ಮಾರುತಿ ಆರೇರ್, ಸಹ ಕಾರ್ಯದರ್ಶಿ ಪ್ರಭಾಕರ್ ದಾಸರ್, ಗೈಡ್ಸ್ ಕ್ಯಾಪ್ಟನ್ ಬಸಮ್ಮ ಗುಜ್ಜಲ್ ಹಾಗೂ ಕಿನ್ನಾಳ ಶಾಲೆಯ ಗುರುಗಳು, ಗಾಂಧೀಜಿ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾ.ಪಂ ಅಧ್ಯಕ್ಷರಾದ ಕರಿಯಮ್ಮ ಉಪ್ಪಾರ್, ಉಪಾಧ್ಯಕ್ಷರಾದ ದುರ್ಗಪ್ಪ ಡೂಂಬರ್, ಪಿಡಿಓ ನೀಲಮ್ಮ ಜಿ.ಬಿ., ಎಎಸ್‌ಓಸಿ ಎಸ್.ಎಚ್ ಹತ್ತಿಮತ್ತೂರು ಸೇರಿದಂತೆ ಶಾಲೆಯ ಶಿಕ್ಷಕರು, ಗ್ರಾ.ಪಂ ಸದಸ್ಯರು, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

## ಹೂಗಾರ ಶ್ರೀ ಮಾದಯ್ಯನವರ ಜಯಂತ್ಯುತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ



ಶಿವಶರಣ ಹೂಗಾರ ಶ್ರೀ ಮಾದಯ್ಯನವರ ಜಯಂತ್ಯುತ್ಸವದ ಅಂಗವಾಗಿ ಹೂಗಾರ ಮಾದಯ್ಯನವರ ಭಾವಚಿತ್ರದ ಮೆರವಣಿಗೆ ವಿಜೃಂಭಣೆಯಿಂದ ಜರುಗಿತು. ಅಡವೀಂದ್ರಸ್ವಾಮಿ ಶ್ರೀಮಠದ ಪೂಜ್ಯಶ್ರೀ ಮಹೇಶ್ವರ ಶ್ರೀಗಳು ಮೆರವಣಿಗೆಗೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಹೂಗಾರ ಸಮಾಜದ ಗದಗ ತಾಲೂಕು ಘಟಕದ ಅಧ್ಯಕ್ಷ ಸಿ.ಎ ಹೂಗಾರ, ಈರಣ್ಣ ಮದ್ಲಿ, ಈರಣ್ಣ ರಂಗಪ್ಪ ಹೂಗಾರ, ಬಿ.ಬಿ ಹೂಗಾರ, ಪ್ರವೀಣ ಹೂಗಾರ, ಸಾವಿತ್ರಿ ಹೂಗಾರ, ಗೀತಾ ಹೂಗಾರ, ಮುತ್ತು ಹೂಗಾರ, ಚನ್ನಪ್ಪ ಹೂಗಾರ, ಹೂಗಾರ ಸಮಾಜದ ತಾಲೂಕು ಘಟಕದ ಪದಾಧಿಕಾರಿಗಳು ಹಾಗೂ ಸಮಾಜದ ಗುರು-ಹಿರಿಯರು ಉಪಸ್ಥಿತರಿದ್ದರು.

ಮೆರವಣಿಗೆಯು ಮುಳಗುಂದ ನಾಕಾ ಅಡವೀಂದ್ರ ಸ್ವಾಮಿಗಳ ಶ್ರೀಮಠದಿಂದ ಆರಂಭಗೊಂಡು, ಜೋಡ ಮಾರುತಿ ದೇವಸ್ಥಾನ, ಬಸವೇಶ್ವರ ವೃತ್ತ, ಹುಯಿಲಗೋಳ ನಾರಾಯಣರಾವ್ ವೃತ್ತ, ಮಹೇಂದ್ರಕರ್ ವೃತ್ತ, ತೋಂಟ-ದಾರ್ಯ ಶ್ರೀಮಠ, ಪಂ. ಪುಟ್ಟರಾಜ ಗವಾಯಿಗಳವರ ವೃತ್ತ, ವೆಂಕಟೇಶ ಟಾಕೀಸ್ ಮಾರ್ಗವಾಗಿ ಗಾನಯೋಗಿ ಪಂಚಾಕ್ಷರ ಗವಾಯಿಗಳವರ ಶ್ರೀಮಠದವರೆಗೆ ಸಾಗಿತು.

## ಮಕ್ಕಳ ಭವಿಷ್ಯಕ್ಕೆ ಕ್ರೀಡೆ ಸಹಕಾರಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳು ಮುಂದಿನ ಭವಿಷ್ಯ ರೂಪಿಸಿಕೊಳ್ಳಲು ಕ್ರೀಡೆ ತುಂಬಾ ಸಹಕಾರಿಯಾಗಿದೆ ಎಂದು ಎಸ್‌ಜೆಜೆಎಂ ಪದವಿಪೂರ್ವ ಮಾಹಾವಿದ್ಯಾಲಯದ ಪ್ರಾಚಾರ್ಯ ಎ.ಎಂ ಅಂಗಡಿ ಹೇಳಿದರು.

ವಿವಿಧ ಕ್ರೀಡೆಗಳಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿರುವ ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪ.ಪೂ ಮಾಹಾವಿದ್ಯಾಲಯದ ವಿದ್ಯಾರ್ಥಿನಿಯರನ್ನು ಅಭಿನಂದಿಸಿ ಅವರು ಮಾತನಾಡಿ, ಪಠ್ಯದ ಜೊತೆಯಲ್ಲಿ ಕ್ರೀಡೆಯಲ್ಲಿಯೂ ಸಾಧನೆ ಮಾಡಬೇಕು. ಅಂದಾಗ ಮಾತ್ರ ಮುಂದಿನ ಭವಿಷ್ಯಕ್ಕೆ ಸಹಕಾರಿಯಾಗುತ್ತದೆ. ಕ್ರೀಡೆಗೆ ಇಂದು ಹೆಚ್ಚಿನ ಮಹತ್ವ ನೀಡುತ್ತಿರುವುದರಿಂದ, ಕ್ರೀಡೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳು ಇಂದು ದೊಡ್ಡ ದೊಡ್ಡ ಇಲಾಖೆಯಲ್ಲಿ ಉನ್ನತ ಸ್ಥಾನವನ್ನು ಅಲಂಕರಿಸಿದ್ದಾರೆ ಎಂದರು.

ರಾಜ್ಯ ಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿನಿಯರಾದ ರೇಣುಕಾ ಗುಡಗೇರಿ, ಲಕ್ಷ್ಮಿ ಶಿರಹಟ್ಟಿ, ನಾಗರತ್ನಾ ಕುಲಕರ್ಣಿ, ಸಮೀತಾ ಗುರಮ್ಮನವರ, ಸಂಜನಾ ಪತ್ರಿ, ಸಂಜನಾ ಮಣ್ಣೂರ, ದೇವಕ್ಕ ಗುಂಜಳ ಆಯ್ಕೆಯಾಗಿ ಮಾಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಇ.ಎಂ ಗುಳೆದಗುಡ್ಡ, ಸಿ.ಎಚ್ ದೊಡ್ಡಮನಿ, ಎಸ್.ಪಿ ಶೀರೂರ, ಆರ್.ಆರ್ ಪಟ್ಟಣ, ಮುತ್ತು ಕುರಬಗೌಳಿ, ಎಸ್. ಆರ್ ಹೀರೆಗೌಡರ, ಎಂ.ಎನ್ ಅಳಲಗೇರಿ, ಬಿ.ಎನ್ ಗೌರಿಮನಿ ಹಾಗೂ ಉಪನ್ಯಾಸಕರು ಇದ್ದರು.

## ಶ್ರೀ.ಜ.ಶಿವಾನಂದ ಪಿಯು ಕಾಲೇಜಿನಲ್ಲಿ ಪಾಲಕರ ಸಭೆ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶ್ರೀ.ಜ ಶಿವಾನಂದ ಪದವಿಪೂರ್ವ ಕಾಲೇಜಿನಲ್ಲಿ ಇತ್ತೀಚೆಗೆ ಪಾಲಕರ ಸಭೆ ನೆರವೇರಿತು. ಸಭೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲಕರು ಪಾಲ್ಗೊಂಡು ಸಲಹೆ, ಸೂಚನೆಯನ್ನು ನೀಡಿದರು.

ಉಪನ್ಯಾಸಕ ಎಂಪಿ ಮಂಟೂರರವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಅತಿಥಿಗಳಾಗಿ ಆಗಮಿಸಿದ ಡಾ. ಜಿ.ಬಿ ಪಾಟೀಲ, ವಿದ್ಯಾರ್ಥಿಗಳಿಗೆ ವಿದ್ಯಾಸಂಸ್ಥೆ ಕೊಡಮಾಡುವ ಸೌಲಭ್ಯಗಳನ್ನು ಪಡೆದು ಪ್ರಗತಿ ಸಾಧಿಸಲು ಕರೆಯಿತ್ತರು. ಪ್ರಾಚಾರ್ಯ ಎಸ್.ವ್ಹಿ ವೆರ್ಣೆಕರ, ವಿದ್ಯಾರ್ಜನೆಯಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಂಡು ಉತ್ತಮ ಫಲಿತಾಂಶವನ್ನು ತಂದುಕೊಡಬೇಕೆಂದು ವಿದ್ಯಾರ್ಥಿಗಳಿಗೆ ಕರೆನೀಡಿದರು.

ಲಕ್ಷ್ಮೀ ಯಲಿ ಹಾಗೂ ಸರಸ್ವತಿ ಯಲಿ ಪ್ರಾರ್ಥಿಸಿದರು. ಶ್ರೀದೇವಿ ಜಂಗಮನಿ ಕಾರ್ಯಕ್ರಮ ನಿರೂಪಿಸಿದರು. ಪ್ರಿಯಾಂಕಾ ಪಾಟೀಲ ವಂದಿಸಿದರು. ಸಭೆಯಲ್ಲಿ ಕಾಲೇಜಿನ ಎಲ್ಲ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಅಂಚೆ ನೌಕರರ ಪ್ರತಿಭಟನೆ




■ ವಿಜಯಸಾಕ್ಷಿ ಸುದ್ದಿ, ಗದಗ

ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಅಖಿಲ ಭಾರತ ಗ್ರಾಮೀಣ ಅಂಚೆ ನೌಕರರ ಸಂಘದಿಂದ ನಗರದ ಜಿಲ್ಲಾ ಅಂಚೆ ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ವಿಭಾಗೀಯ ಕಾರ್ಯದರ್ಶಿ ಎಂ.ಎನ್. ಕುರಹಟ್ಟಿ ಮಾತನಾಡಿ, 2018ರಲ್ಲಿ 15 ದಿನ ಮುಷ್ಕರ ಮಾಡಿ, 2018 ಜುಲೈ 1ರಂದು 7ನೇ ವೇತನ ಆಯೋಗ ಪಡೆದುಕೊಳ್ಳಲಾಗಿದೆ. ಆದರೆ, ಕಮಲೇಶಚಂದ್ರ 7ನೇ ವೇತನ ವರದಿಯ ಕೆಲವು ಮಾತ್ರ ಕೊಟ್ಟು ಇನ್ನೂ ಕೆಲವು ಬೇಡಿಕೆಗೆ ಮೀನಮೇಷ ಎಣಿಸುತ್ತಿದೆ. ನಮ್ಮ ಸಮಸ್ಯೆಗೆ ನಾವೇ ಪರಿಹಾರ ಪಡೆದುಕೊಳ್ಳಬೇಕು.

8 ಗಂಟೆ ಕೆಲಸ ನೀಡುವುದು ಮತ್ತು ಪಿಂಚಣಿ ಸೇರಿದಂತೆ ಎಲ್ಲಾ ಸೌಲಭ್ಯ ಒದಗಿಸುವುದು, ಸೇವಾ ಹಿರಿತನದ ಆಧಾರದ ಮೇಲೆ 12/24/36 ಸೇವೆ ಸಲ್ಲಿಸಿದ ನೌಕರರಿಗೆ ವಿಶೇಷ ಇಂಕ್ರಿಮೆಂಟ್ ನೀಡುವುದು, ಅವೈಜ್ಞಾನಿಕ ಗುರಿ ನೀಡಿ ಮೇಳಗಳನ್ನು ನಡೆಸುತ್ತಿರುವುದನ್ನು ನಿಲ್ಲಿಸುವುದು, ಗ್ರೂಪ್ ಇನ್ ಕವರೇಜ್, ಗ್ರಾಚ್ಯುಟಿ ಹಣವನ್ನು ಇನ್ಶೂರೆನ್ಸ್ 5ಲಕ್ಷ ರು.ವರೆಗೆ ಹೆಚ್ಚಿಸುವುದು, 180 ದಿನಗಳ ರಜೆ ಉಳಿಸಿಕೊಳ್ಳಲು ಅವಕಾಶ ಕಲ್ಪಿಸುವುದು, ನೌಕರರ ಮತ್ತು ಅವರ ಕುಟುಂಬದ ಸದಸ್ಯರಿಗೆ ವೈದ್ಯಕೀಯ ಇಲಾಖೆ ಸೌಲಭ್ಯ ಒದಗಿಸುವುದು ಸೇರಿದಂತೆ ಇನ್ನಿತರ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿದರು.

ಈ ವೇಳೆ ಗದಗ ಜಿಲ್ಲಾ ಅಂಚೆ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಕಾರ್ಮಿಕ ಮುಖಂಡರಾದ ಜಿ.ಆರ್.ಕಮ್ಮಾರ, ಶರಣಪ್ಪ ಹೊಂಬಳ, ಉಮೇಶ ಮುಶಣ್ಣವರ, ರಾಜೇಂದ್ರಗೌಡ ಪಾಟೀಲ, ಬಿ.ಎಫ್.ಹಡಪದ, ವಿನಾಯಕ ಆಚಲಕರ, ಎಚ್.ಎಂ.ಹುದ್ದಾರ, ಎ.ಎಚ್.ನದಾಫ್, ಜಿ.ಎಂ. ಗಾಡಿ, ಮಹೇಶ ಹೊಸಮನಿ, ಅಶ್ವಿನಿ ಕುಲಕರ್ಣಿ, ರೇಣುಕಾ ಹೊಳೆಯಣ್ಣವರ, ಪ್ರವೀಣ ಚವ್ಹಾಣ, ಮಹಾಂತೇಶ ಅಂಗಡಿ, ಕೆ.ವಾಯ್.ಅಮಟೆ, ಬಸವರಾಜ ಮಡಿವಾಳರ, ಬಿ.ಎಲ್.ದೊಡ್ಡೂರ ಸೇರಿದಂತೆ ಇತರರು ಇದ್ದರು.

## ಮೃತರ ಸಂಖ್ಯೆ 40ಕ್ಕೆ ಏರಿಕೆ, ಸಂಕಷ್ಟದಲ್ಲಿರುವ ಸಾವಿರಾರು ಜನರನ್ನು ರಕ್ಷಿಸಲು ಸೇನೆ ಏರ್ ಲಿಫ್ಟ್ ವ್ಯವಸ್ಥೆ!

■ ವಿಜಯಸಾಕ್ಷಿ ಸುದ್ದಿ, ಸಿಕ್ಕಿಂ

ಈಶಾನ್ಯ ರಾಜ್ಯ ಸಿಕ್ಕಿಂನಲ್ಲಿ ಮೇಘಸ್ಫೋಟ ಹಾಗೂ ಹಠಾತ್ ಪ್ರವಾಹದಿಂದಾಗಿ ಕನಿಷ್ಠ 40 ಜನರು ಸಾವನ್ನಪ್ಪಿದ್ದು, ಸಂಕಷ್ಟಕ್ಕೆ ಸಿಲುಕಿರುವ ಸಾವಿರಾರು ಜನರನ್ನು ಹೆಲಿಕಾಪ್ಟರ್ ಮೂಲಕ ರಕ್ಷಿಸಲು ಸೇನೆ ವ್ಯವಸ್ಥೆ ಮಾಡಿದೆ ಎಂದು ಅಧಿಕಾರಿಗಳು ಶುಕ್ರವಾರ ತಿಳಿಸಿದ್ದಾರೆ. ಚೀನಾ ಮತ್ತು ನೇಪಾಳದೊಂದಿಗಿನ ಭಾರತದ ಗಡಿಯ ಸಮೀಪವಿರುವ ಪರ್ವತದಲ್ಲಿನ ಬೃಹತ್ ನೀರ್ಗಲ್ಲು ಒಡೆದ ನಂತರ ಸಿಕ್ಕಿಂನಲ್ಲಿ ಪ್ರವಾಹ ಉಂಟಾಗಿದ್ದು, ಅಪಾರ ಪ್ರಮಾಣದಲ್ಲಿ ಸಾವು, ನೋವು, ಆಸ್ತಿ ಪಾಸ್ತಿ ನಷ್ಟ ಸಂಭವಿಸಿದೆ.

ಜಾಗತಿಕ ತಾಪಮಾನ ಏರಿಕೆ ಮತ್ತು ಮಂಜುಗಡ್ಡೆ ಕರಗಿದಂತೆ ಹಿಮಾಲಯದಾದ್ಯಂತ ಹೆಚ್ಚಾಗುತ್ತಿರುವುದು ಅಪಾಯಕಾರಿ ಯಾಗಿದೆ ಎಂದು ಹವಾಮಾನ ವಿಜ್ಞಾನಿಗಳು ಎಚ್ಚರಿಸಿದ್ದಾರೆ. ರಕ್ಷಣಾ ತಂಡಗಳು ಕಾರ್ಯಾಚರಣೆ ನಡೆಸಿ,ರಾತ್ರೋರಾತ್ರಿ ಹೆಚ್ಚಿನ ಮೃತದೇಹಗಳನ್ನು ಹೊರತೆಗೆದಿದ್ದಾರೆ. 19 ಜನರ ಸಾವನ್ನು ತಮ್ಮ ಕಚೇರಿಗೆ ದೃಢಪಡಿಸಿದೆ ಎಂದು ಸಿಕ್ಕಿಂ ರಾಜ್ಯದ ಉನ್ನತಾಧಿಕಾರಿ ವಿಬಿ ಪಾಠಕ್ ಎಎಫ್‌ಪಿಗೆ ತಿಳಿಸಿದ್ದಾರೆ. ಕಳೆದ ಮೂರು ದಿನಗಳಲ್ಲಿ ತಮ್ಮ ರಾಜ್ಯದಲ್ಲಿ ಹೆಚ್ಚುವರಿ 21 ಶವಗಳನ್ನು ವಶಪಡಿಸಿಕೊಳ್ಳಲಾಗಿದೆ ನೆರೆಯ ಪಶ್ಚಿಮ ಬಂಗಾಳದ ಜಿಲ್ಲಾ ಮ್ಯಾಜಿಸ್ಟ್ರೇಟ್ ಶಮಾ ಪರ್ವೀನ್ ತಿಳಿಸಿದ್ದಾರೆ.

ರಾಜ್ಯದಾದ್ಯಂತ ರಸ್ತೆಗಳು, ಸೇತುವೆಗಳು ಮತ್ತು ಟೆಲಿಫೋನ್ ಲೈನ್‌ಗಳು ನಾಶವಾಗಿವೆ, ಸ್ಥಳಾಂತರಗೊಳಿಸುವಿಕೆ ಮತ್ತು ದೇಶದ ಉಳಿದ ಭಾಗಗಳಿಂದ ಸಂಪರ್ಕ ಕಡಿತಗೊಂಡ ಸಾವಿರಾರು ಜನರೊಂದಿಗೆ ಸಂವಹನ ನಡೆಸುವ ಪ್ರಯತ್ನ ನಡೆಯುತ್ತಿದೆ.

## ನೀವೂ ನಮ್ಮ ಜೊತೆ ಕೈಜೋಡಿಸಿ

'ವಿಜಯಸಾಕ್ಷಿ'

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

## ರಾಷ್ಟ್ರೀಯ ವೈರಲ್ ಹೆಪಟೈಟಿಸ್ ನಿಯಂತ್ರಣ ಕಾರ್ಯಕ್ರಮ ದಿನ ಆಚರಣೆ

▸▸ ಮೊದಲನೇ ಪುಟದಿಂದ

**ಹೆಪಟೈಟಿಸ್ ಕಾಯಿಲೆಯ ಲಕ್ಷಣಗಳು**

ಆಯಾಸ ಕೀಲು ನೋವು, ಹೊಟ್ಟೆ ನೋವು, ವಾಂತಿ ಹಸಿವು ಆಗದೇ ಇರುವುದು, ಚರ್ಮ ಹಳದಿ ಬಣ್ಣಕ್ಕೆ ತಿರುಗುವುದು.

**ಕಾಯಿಲೆಗೆ ನಿಯಂತ್ರಣ ವಿಧಾನಗಳು**

ಜೀವನಶೈಲಿ ಮತ್ತು ವರ್ತನೆ ಬದಲಾವಣೆ ಅರಿವು ಮೂಡಿಸುವುದು, ಹೆಪಟೈಟಿಸ್-ಬಿ ಲಸಿಕೆ ಹಾಕಿಸುವಿಕೆ (ನವಜಾತ ಶಿಶು, ಆರೋಗ್ಯ ಕಾರ್ಯಕರ್ತರು ಮತ್ತು ಹೆಚ್ಚು ಸೋಂಕಿನ ಅಪಾಯ ಉಳ್ಳವರು) ಸುರಕ್ಷಿತ ರಕ್ತ ಮತ್ತದರ ಉತ್ಪನ್ನಗಳ ಬಳಕೆ ಸುರಕ್ಷಿತ ಚುಚ್ಚುಮದ್ದು ನೀಡುವಿಕೆ ಸುರಕ್ಷಿತ ನೀರು, ಸ್ವಚ್ಛ ಶೌಚಾಲಯ ಉಪಯೋಗ ಹಾಗೂ ನೈರ್ಮಲ್ಯ ಕಾಪಾಡುವಿಕೆಯಿಂದ ಕಾಯಿಲೆ ನಿಯಂತ್ರಿಸಬಹುದಾಗಿದೆ.

ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಹೆಪಟೈಟಿಸ್ ಖಾಯಿಲೆಗೆ ಉಚಿತ ತಪಾಸಣೆ ಹಾಗೂ ಪ್ರಯೋಗಾಲಯ ಸೇವೆಗಳು , ಜಿಲ್ಲಾಮಟ್ಟದ ಸರ್ಕಾರಿ ಆಸ್ಪತ್ರೆ/ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಉಚಿತ ತಪಾಸಣೆ, ಹೆಚ್ಚಿನ ಪ್ರಯೋಗಾಲಯ ಸೇವೆಗಳು ಹಾಗೂ ಚಿಕಿತ್ಸೆಗಳ ಸೌಲಭ್ಯವಿರುತ್ತವೆ ಎಂದು ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿಗಳಾದ ಡಾ. ಅರುಂಧತಿ ಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಣೇಶನ ವಿಸರ್ಜನಾ ಕಾರ್ಯ ಶಾಂತಯುತವಾಗಿರಲಿ

▸▸ ಮೊದಲನೇ ಪುಟದಿಂದ

ನೇಮಿಸಲಾಗಿದೆ, ಡ್ರೋನ್ ಕ್ಯಾಮರಾ ಮೂಲಕ ಚಿತ್ರೀಕರಣ ವ್ಯವಸ್ಥೆ ಮಾಡಲಾಗಿದ್ದು, ಮಂಡಳಿಗಳವರು ಪೊಲೀಸರೊಂದಿಗೆ ಎಷ್ಟು ಸಹಕಾರ ನೀಡುವಿರೋ ಅಷ್ಟೇ ಪ್ರಮಾಣದಲ್ಲಿ ಇಲಾಖೆಯು ನಿಮ್ಮೊಂದಿಗೆ ಸಹಕಾರದಿಂದ ನಡೆದುಕೊಳ್ಳಲಿದೆ ಎಂದರು.

ಸಭೆಯಲ್ಲಿ ಡಿವೈಎಸ್‌ಪಿ ಎಂ.ಬಿ ಸಂಕದ, ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ಯೂಸೆಫ್ ಜಮೂಲಾ, ಗಣೇಶನ ಮಂಡಳಿ ಸದಸ್ಯರು ಸಲಹೆ ಸೂಚನೆಗಳನ್ನು ನೀಡಿದರು. ಮಂಜುನಾಥ ಮಾಗಡಿ, ಶಂಕರ ಗೋಡಿ, ಬಸವರಾಜ ಚಕ್ರಸಾಲಿ, ಪ್ರಕಾಶ ಮಾದನೂರ, ಮುರಘೇಂದ್ರಯ್ಯಸ್ವಾಮಿ ಹಿರೇಮಠ, ಫಕ್ಕೀರೇಶ ಅಣ್ಣಿಗೇರಿ, ಮಂಜುನಾಥ ಕೊಡಳ್ಳಿ, ಮಹೇಶ ಹೆಬ್ಬಾಳ, ಮುತ್ತು ಹೆಬ್ಬಾಳ, ಜಯಕ್ಕ ಕಳ್ಳಿ, ಮುತ್ತು ಕರ್ಜೆಕಣ್ಣವರ, ಮಾಂತೇಶ ಅಣ್ಣಿಗೇರಿ, ಮಂಜುನಾಥ ಮುಳಗುಂದ, ನವೀನ ಕುಂಬಾರ ಸೇರಿದಂತೆ ಅನೇಕರು ಹಾಜರಿದ್ದರು.

## ರಾಜ್ಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

▸▸ ಮೊದಲನೇ ಪುಟದಿಂದ

ಸಲ್ಲಿಸಬಹುದಾಗಿದೆ. ಅರ್ಜಿಯೊಂದಿಗೆ ಸಲ್ಲಿಸಬೇಕಾದ ಅಗತ್ಯ ದಾಖಲಾತಿಗಳು ಅರ್ಜಿದಾರರ 02 ಭಾವ ಚಿತ್ರ, ವಿಕಲಚೇತನರ ವಿಶಿಷ್ಟ ಗುರುತಿನ ಚೀಟಿ ಝೆರಾಕ್ಸ್ ಪ್ರತಿ, ಅರ್ಜಿದಾರರು ಅರ್ಜಿ ನಮೂನೆಯಲ್ಲಿ ಜಿಲ್ಲೆ, ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಾಡಿದ ಸಾಧನೆಗಳ ಬಗ್ಗೆ ಪ್ರಮಾಣ ಪತ್ರಗಳನ್ನು ಕ್ರಮ ಸಂಖ್ಯೆಯೊಂದಿಗೆ ನಮೂದಿಸಿ ಸಲ್ಲಿಸುವುದು, ಆಧಾರ ಕಾರ್ಡ್ ಹಾಗೂ ಚುನಾವಣಾ ಗುರುತಿನ ಚೀಟಿ ಝೆರಾಕ್ಸ್ ಪ್ರತಿ ಲಗತ್ತಿಸುವುದು. ಕೇವಲ ಹಾಳೆಗಳ ರೂಪದಲ್ಲಿ ಸಲ್ಲಿಸದೇ ತಮ್ಮ ಪ್ರಸ್ತಾವನೆಯಲ್ಲಿ ಕವರ್ ಪತ್ರದೊಂದಿಗೆ ಅರ್ಜಿದಾರರ ಬ್ಯಾಂಕ್ ಖಾತೆಯ ವಿವರದ ಪ್ರತಿಯನ್ನು ಲಗತ್ತಿಸಿ ಸ್ಪೈರಲ್ ಬ್ಯಾಂಡಿಂಗ್ ಮಾಡಿಸಿ ದ್ವಿಪ್ರತಿಯಲ್ಲಿ ಜಿಲ್ಲಾ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಾರ್ಯಾಲಯ, ಕೊಠಡಿ ಸಂಖ್ಯೆ 029, ನೆಲಮಹಡಿ, ಜಿಲ್ಲಾ ಆಡಳಿತ ಭವನ, ಗದಗ ಇಲ್ಲಿ ಸಂಪರ್ಕಿಸಬಹುದಾಗಿದೆ.

## ಪರಿಸ್ಥಿತಿ ನಿಭಾಯಿಸಿ ರೈತರಿಗೆ ನ್ಯಾಯ ಒದಗಿಸಿ

▸▸ ಮೊದಲನೇ ಪುಟದಿಂದ

ಮನವರಿಕೆ ಮಾಡಿಕೊಡಬೇಕಾಗಿತ್ತು. ರೈತರು ಮಳೆ-ಬೆಳೆ ಇಲ್ಲದೇ ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ಶಾಸಕ ನಡೆ ಖಂಡನೀಯ ಎಂದರು.

ಈ ವೇಳೆ ಸಂಸದ ಶಿವಕುಮಾರ ಉದಾಸಿ ಅವರ ಮೇಲೂ ಹರಿಹಾಯ್ದು ಹೋಗೆಸೊಪ್ಪಿನ, ಬರುವ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂಬ ಕಾರಣದಿಂದ ಮತ ನೀಡಿದ ಜನತೆಗೆ ಅನ್ಯಾಯ ಮಾಡಿದ್ದಾರೆ. ಮಾನವೀಯತೆ, ಕಳಕಳಿ ಇದ್ದರೆ ಕೇಂದ್ರದ ಅಧಿಕಾರಿಗಳು ಮತ್ತು ಸಚಿವರಿಗೆ ವಸ್ತುಸ್ಥಿತಿ ಮನವರಿಕೆ ಮಾಡಿಕೊಡುವ ಕೆಲಸ ಮಾಡಬೇಕು.

ಒಂದು ವೇಳೆ ಅಧಿಕಾರಿಗಳು ವರದಿಯ ಪರಿಣಾಮದಿಂದ ಮುಂಡರಗಿ ಸೇರಿ ಜಿಲ್ಲೆಯ ಎಲ್ಲ ರೈತರು ಬೆಳೆವಿಮೆ, ಬೆಳೆಹಾನಿ ಪರಿಹಾರ ಇತರೆ ಸೌಲಭ್ಯದಿಂದ ವಂಚಿತರಾದಲ್ಲಿ, ಇದಕ್ಕೆ ನಮ್ಮ ಪ್ರತಿನಿಧಿಗಳೇ ಹೊಣೆಗಾರರಾಗುತ್ತಾರೆ ಎಂದರು.

ಈ ವೇಳೆ ರೈತರಾದ ಟಾಕಪ್ಪ ಸಾತಪುತೆ, ಶಿವಾನಂದ ಲಿಂಗಶೆಟ್ಟಿ, ರಾಮಣ್ಣ ಗೌರಿ, ಕರಿಯಪ್ಪ ಹುರಕನವರ, ಶೇಖಣ್ಣ ಗೋಡಿ ಸೇರಿ ಹಲವರಿದ್ದರು.

## ಮುಖ್ಯಮಂತ್ರಿಗಳ ಜನತಾ ದರ್ಶನ ಮುಂದೂಡಿಕೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದಿ. 09-10-23 ರಂದು ದೆಹಲಿಯಲ್ಲಿ ನಡೆಯಲಿರುವ ಎಐಸಿಸಿ ಕಾರ್ಯಕಾರಿ ಸಭೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳು ಭಾಗವಹಿಸಬೇಕಿರುವುದರಿಂದ ಅಂದು ನಡೆಸಲು ಉದ್ದೇಶಿಸಿದ್ದ ಜನತಾ ದರ್ಶನ ಕಾರ್ಯಕ್ರಮವನ್ನು ಮುಂದೂಡಲಾಗಿದೆ. ಜನತಾ ದರ್ಶನದ ಮುಂದಿನ ದಿನಾಂಕವನ್ನು ನಂತರ ತಿಳಿಸಲಾಗುವುದು. ಅಡಚಣೆಗಾಗಿ ವಿಷಾದಿಸುತ್ತೇವೆ ಎಂದು ಮುಖ್ಯಮಂತ್ರಿ ಕಚೇರಿ ಪ್ರಕಟಣೆ ತಿಳಿಸಿದೆ.

## ಸೆಪ್ಟೆಂಬರ್ -2023ರ ಅಂತ್ಯದವರೆಗೆ 6,33,000 ರೂ. ಶುಲ್ಕ ವಸೂಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಒಟ್ಟು ರೂ.43,67,747 ಸತ್ಯಾಪನೆ ಶುಲ್ಕ ಸಂಗ್ರಹಿಸಲಾಗಿದ್ದು, ಕಿರಾಣಿ ವ್ಯಾಪಾರಸ್ಥರು, ನ್ಯಾಯಬೆಲೆ ಅಂಗಡಿಗಳು, ಸೀಮೆ ಎಣ್ಣೆ ಸಗಟು ಮತ್ತು ಚಿಲ್ಲರೆ ವ್ಯಾಪಾರಸ್ಥರ ಹಾಗೂ ಇನ್ನಿತರ ಒಟ್ಟು 493 ಅಂಗಡಿಗಳ ತಪಾಸಣೆ ಮಾಡಿ ತಪ್ಪಿತಸ್ಥರ ವಿರುದ್ಧ ಒಟ್ಟು 121 ಮೊಕದ್ದಮೆಗಳನ್ನು ಹೂಡಲಾಗಿರುತ್ತದೆ. ಸದರಿ ಮೊಕದ್ದಮೆಗಳನ್ನು ಅಭಿಸಂದಾನದ ಮೂಲಕ ಇತ್ಯರ್ಥ ಮಾಡಿ ಸೆಪ್ಟೆಂಬರ್ 2023ರ ಅಂತ್ಯದವರೆಗೆ ಒಟ್ಟು ರೂ. 6,33,000 ಅಭಿಸಂಧಾನ ದಂಡದ ಶುಲ್ಕವನ್ನು ವಸೂಲು ಮಾಡಲಾಗಿದೆ. ಯಾವುದೇ ತೂಕ ಮತ್ತು ಅಳತೆಗೆ ಸಂಬಂಧಿಸಿದಂತೆ ದೂರುಗಳಿದ್ದಲ್ಲಿ ಗ್ರಾಹಕರು ಸಹಾಯಕ ನಿಯಂತ್ರಕರು, ಕಾನೂನು ಮಾಪನ ಶಾಸ್ತ್ರ ಇಲಾಖೆ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣ, ಸಂಕಣ್ಣವರ ಬಡಾವಣೆ ಹತ್ತಿರ ಗದಗ ಸಹಾಯವಾಣಿ ಸಂಖ್ಯೆ 18005991100 ಸಂಪರ್ಕಿಸಬಹುದಾಗಿದೆ.

ಜಿಲ್ಲಾಮಟ್ಟದ ಯುವ ಉತ್ಸವ-ಇಂಡಿಯಾ@2047 ಕಾರ್ಯಕ್ರಮದಲ್ಲಿ ಸಚಿವ ಸಂತೋಷ ಲಾಡ್

# ಯುವಕರ ಶಕ್ತಿಯೇ ದೇಶದ ಶಕ್ತಿ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಯುವಕರು ಮಾನವೀಯ ಮೌಲ್ಯಗಳೊಂದಿಗೆ ಸಮಯಪ್ರಜ್ಞೆ ಮತ್ತು ಸಮಯ ಸದುಪಯೋಗದ ಕಲೆ ತಿಳಿದಿರಬೇಕು. ಅಂದಾಗ ಮಾತ್ರ ರಾಷ್ಟ್ರದ ಅಭಿವೃದ್ಧಿಗೆ ನೆರವಾಗಲು ಸಹಾಯವಾಗುತ್ತದೆ ಎಂದು ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್.ಲಾಡ್ ಹೇಳಿದರು.

ಅವರು, ಶುಕ್ರವಾರ ನಗರದ ಕರ್ನಾಟಕ ಕಾಲೇಜಿನ ಡಾ.ಅಣ್ಣಾಜಿರಾವ್ ಶಿರೂರು ಸೃಜನಾ ರಂಗಮಂದಿರದಲ್ಲಿ ನೆಹರು ಯುವ ಕೇಂದ್ರ, ಶ್ರೀ ಕುಮಾರೇಶ್ವರ ಕಲ್ಚರಲ್ ಸೊಸೈಟಿ(ರಿ), ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಕಲಾ ಮಹಾವಿದ್ಯಾಲಯ ಹಾಗೂ ಕರ್ನಾಟಕ ವಿಜ್ಞಾನ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಜಿಲ್ಲಾಮಟ್ಟದ ಯುವ ಉತ್ಸವ-ಇಂಡಿಯಾ@2047 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನೆಹರು ಯುವ ಕೇಂದ್ರವು ಯುವ ಸಮೂಹದಲ್ಲಿರುವ ಸಾಂಸ್ಕೃತಿಕ, ಕ್ರೀಡೆ, ಕಲೆ, ಚಿತ್ರಕಲೆ, ನೃತ್ಯ ಮತ್ತು ಇತರೆ ವಿಭಾಗಳಲ್ಲಿನ ಅವರ ಪ್ರತಿಭೆಗಳನ್ನು ಗುರುತಿಸಿ, ಪ್ರೋತ್ಸಾಹ ಮಾಡುತ್ತಿದೆ. ವಿವಿಧ ಕ್ರೀಡಾ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳನ್ನು ನಿರಂತರವಾಗಿ ಆಯೋಜಿಸುವ ಮೂಲಕ ಯುವಕ, ಯುವತಿಯರಿಗೆ ಸೂಕ್ತ ವೇದಿಕೆ ಕಲ್ಪಿಸುತ್ತಿದೆ ಎಂದು ಸಚಿವರು ತಿಳಿಸಿದರು.

ದೇಶದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಯುವಶಕ್ತಿ ಇದ್ದು, ಅದನ್ನು ಉತ್ಪಾದನೆಯ ಸಂಪನ್ಮೂಲವಾಗಿ ಬಳಸಿದರೆ ದೇಶಕ್ಕೆ ಒಂದು ದೊಡ್ಡ ಶಕ್ತಿಯಾಗುತ್ತದೆ. ವಿದ್ಯಾರ್ಥಿಗಳು ಮೊಬೈಲ್ ಗೀಳಿಗೆ ಒಳಗಾಗದೆ, ಅಗತ್ಯವಿದ್ದಷ್ಟು ಮಾತ್ರ, ಮಿತವಾಗಿ ಬಳಸಬೇಕು. ಅತಿಯಾದ ಮೊಬೈಲ್ ಬಳಕೆ ಮೆದುಳಿನ ಕ್ರಿಯಾಶೀಲತೆ ಕಡಿಮೆ ಮಾಡಿ, ಜ್ಞಾಪಕ ಶಕ್ತಿ ಕುಂದುವಂತೆ ಮಾಡುತ್ತದೆ. ಮೊಬೈಲ್ ಬಳಕೆ ಬಗ್ಗೆ ಎಚ್ಚರವಿರಬೇಕು ಎಂದು ಅವರು ಹೇಳಿದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಅರವಿಂದ ಬೆಲ್ಲದ ಮಾತನಾಡಿ,

ಯುವ ಜನತೆಯು ಉದ್ಯೋಗದಾತ, ಉದ್ಯೋಗನಿರತರು ಉತ್ಪಾದನೆ ಕ್ಷೇತ್ರದ ಒಂದು ಭಾಗವಾದಾಗ ಮಾತ್ರ ದೇಶದ ಶಕ್ತಿ, ಸಂಪತ್ತು ಬೆಳವಣಿಗೆಯಾಗಲು ಸಾಧ್ಯವಾಗುತ್ತದೆ ಎಂದರು.

ಯುವಕರು ದೇಶಕ್ಕೆ ತಮ್ಮನ್ನು ತಾವು ತೊಡಗಿಸಿಕೊಂಡಾಗ ಮಾತ್ರ ದೇಶ ಉತ್ತಮವಾಗಲು ಸಾಧ್ಯ. ಧಾರವಾಡವು ಸಾಹಿತ್ಯ ಮತ್ತು ಶಿಕ್ಷಣ ಕೇಂದ್ರವಾಗಿದ್ದು ಅತಿ ಹೆಚ್ಚು ಜ್ಞಾನಪೀಠ ಪ್ರಶಸ್ತಿ ಪಡೆದ ಜಿಲ್ಲೆಯಾಗಿದೆ. ನೆಹರು ಯುವ ಕೇಂದ್ರವು ಯುವ ಸಮುದಾಯದಲ್ಲಿರುವ ಕೌಶಲ್ಯವನ್ನು ಬೆಳೆಸುವ ಕೆಲಸ ಮಾಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ದಕ್ಷಿಣ ವಲಯದ ನೆಹರು ಯುವ ಕೇಂದ್ರ ಸಂಘಟನೆಯ ಪ್ರಾದೇಶಿಕ ನಿರ್ದೇಶಕ ಎಂ.ಎನ್.ನಟರಾಜ್, ನೆಹರು ಯುವ ಕೇಂದ್ರ ಜಿಲ್ಲಾ ಯುವ ಅಧಿಕಾರಿ ಎಂ.ಗೌತಮ ರೆಡ್ಡಿ, ಕರ್ನಾಟಕ ಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಡಿ.ಬಿ.ಕರಡೋಣಿ, ಕರ್ನಾಟಕ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಮಂಜಲಿ ಸಾಳುಂಕೆ ಉಪಸ್ಥಿತರಿದ್ದರು.

ಶ್ರೀ ಕುಮಾರೇಶ್ವರ ಕಲ್ಚರಲ್ ಸೊಸೈಟಿ ಅಧ್ಯಕ್ಷ ಮಲ್ಲಿಕಾರ್ಜುನ ಚಿಕ್ಕಮಠ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಈರಣ್ಣ ಇಂಜಗನೇರಿ ಕಾರ್ಯಕ್ರಮ ನಿರೂಪಿಸಿದರು. ಸಂಯೋಜಕ ಪ್ರಕಾಶ ಬಾಳಿಕಾಯಿ ವಂದಿಸಿದರು.

ಕಾರ್ಯಕ್ರಮದಲ್ಲಿ ಭಾಷಣ, ಚಿತ್ರಕಲಾ, ಕವನ ರಚನಾ , ಮೊಬೈಲ್ ಛಾಯಾಚಿತ್ರ, ಸಮೂಹ ನೃತ್ಯ, ಜನಪದ ನೃತ್ಯ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು.

## ಡಿಸೆಂಬರ್ 09ರಂದು ರಾಷ್ಟ್ರೀಯ ಲೋಕ ಅದಾಲತ್

■ ವಿಜಯಸಾಕ್ಷಿ ಸುದ್ದಿ, ಗದಗ

ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರ ಆದೇಶದನ್ವಯ ಜಿಲ್ಲೆಯಲ್ಲಿ ಡಿಸೆಂಬರ್ 9 ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜಿ ಸಂಧಾನ ಮಾಡಿಕೊಳ್ಳುವ ಮೂಲಕ ತಮ್ಮ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ. ರಾಜಿ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ಬಸವರಾಜ ಅವರು ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿ ರಾಜಿ ಸಂಧಾನಕ್ಕಾಗಿ ಸಿವಿಲ್ ದಾವೆಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಎಮ್.ಎಮ್.ಆರ್.ಡಿ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜಿ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾ-ಜಿಗಾಗಿ ಗುರುತಿಸಲಾಗಿದ್ದು, ಪ್ರತಿದಿನ ರಾಜಿಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂದಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜಿ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನ ಒಲಿಸಿ ರಾಜಿ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು, ಪ್ರಕರಣಗಳಿಗೆ ಸಂಬಂದಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂದಪಟ್ಟ ಅಧಿಕಾರಿಗಳು, ಇಲಾಖೆಗಳವರು ಡಿಸೆಂಬರ್ 9 ರಂದು ಜರುಗುವ ರಾಷ್ಟ್ರೀಯ ಲೋಕ ಅದಾಲನ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜಿ ಸಂಧಾನ ಮೂಲಕ ಪರಿಹರಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಗುರುಪ್ರಸಾದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಗದುಗಿನ ಅಡವೀಂದ್ರಸ್ವಾಮಿ ಮಠದ ದಸರಾ ಮಹೋತ್ಸವ ಉದ್ಘಾಟಿಸುವಂತೆ ಕೋರಿ ಬೆಟಗೇರಿಯ ಧಾರ್ಮಿಕ ಚಿಂತಕ ದಂಪತಿಗಳಾದ ಶ್ರೀಮತಿ ಯಶೋದಾ ಬಸವರಾಜ ಗಿಡ್ನಂದಿ ದಂಪತಿಗಳಿಗೆ ಶ್ರೀಮಠದ ದಸರಾ ಮಹೋತ್ಸವ ಸಮಿತಿಯ ಪದಾಧಿಕಾರಿಗಳು ಅಧಿಕೃತ ಆಮಂತ್ರಣ ನೀಡಿದರು.

ಅಂದಾನಪ್ಪ ದೊಡ್ಡಮೇಟಿ ಸ್ಮಾರಕ ನಿರ್ಮಾಣಕ್ಕೆ ಬೀಚಿ ಬಳಗದ ಹರ್ಷ

## ಅಭಿಮಾನಿಗಳ ಆಗ್ರಹಕ್ಕೆ ಜಯ ದೊರಕಿದೆ



> ಹಿಂದಿನ ಅಧ್ಯಕ್ಷ ಎಂ.ಎಸ್ ದಢೇಸೂರಮಠ ಮಾತನಾಡಿ, ದೊಡ್ಡಮೇಟಿಯವರ ಸ್ಮಾರಕ ನಿರ್ಮಾಣಕ್ಕೆ ನರೇಗಲ್ಲದ ಬೀಚಿ ಬಳಗವೂ ಸಹ ಹಲವಾರು ಬಾರಿ ಆಗ್ರಹಿಸಿದೆ. ಈ ಆಗ್ರಹಕ್ಕೆ ಈಗ ಜಯ ದೊರಕಿದೆ. ಇಂತಹ ಜಯವನ್ನು ನಮಗೆ ತಂದುಕೊಟ್ಟ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೂ, ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ ಪಾಟೀಲರಿಗೂ, ಮುಖ್ಯಮಂತ್ರಿಗಳ ಮೇಲೆ ಒತ್ತಡ ತಂದು ಈ ಭಾಗದ ಜನರ ಕನಸನ್ನು ನನಸು ಮಾಡುವಲ್ಲಿ ಶ್ರಮಿಸಿದ ಶಾಸಕ ಜಿ.ಎಸ್ ಪಾಟೀಲರಿಗೂ ಬಳಗದ ಸರ್ವ ಸದಸ್ಯರ ಪರವಾಗಿ ಅಭಿನಂದನೆಗಳು ಎಂದರು.

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸ್ವಾತಂತ್ರ್ಯ ಯೋಧ ಅಂದಾನಪ್ಪ ದೊಡ್ಡಮೇಟಿಯವರ ಸ್ಮಾರಕ ಭವನ ನಿರ್ಮಾಣಕ್ಕೆ ಸರಕಾರ ಅನುಮೋದನೆ ನೀಡಿದ್ದಕ್ಕೆ ನರೇಗಲ್ಲದ ಬೀಚಿ ಬಳಗವು ಹರ್ಷ ವ್ಯಕ್ತಪಡಿಸಿದೆ.

ಈ ಕುರಿತು ಇಲ್ಲಿನ ಹಿರೇಮಠದ ಸಭಾಭವನದಲ್ಲಿ ನಡೆದ ಬೀಚಿ ಬಳಗದ ತುರ್ತು ಸಭೆಯಲ್ಲಿ ಬಳಗದ ಅಧ್ಯಕ್ಷ ಕೆ.ಎಸ್ ಕಳಕಣ್ಣವರ ಮಾತನಾಡಿ, ಈ ಭಾಗದಲ್ಲಿ ಜಕ್ಕಲಿಯ ದೊಡ್ಡಮೇಟಿ ಮನೆತನಕ್ಕೆ ತನ್ನದೇ ಆದ ಇತಿಹಾಸವಿದೆ. ಕರ್ನಾಟಕದ ಏಕೀಕರಣದಲ್ಲಿಯೂ ಮುಂಚೂಣಿಯಲ್ಲಿದ್ದ ಅಂದಾನಪ್ಪ ದೊಡ್ಡಮೇಟಿಯವರ ಸಮಾಧಿ ಯಾವ ಸ್ಮಾರಕವನ್ನೂ ಕಾಣದೆ ಹಾಗೇ ಇತ್ತು. ಈಗ ಅದಕ್ಕೆ ಚಾಲನೆ ನೀಡಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಬೀಚಿ ಬಳಗದ ಪರವಾಗಿ ಹೃತ್ಪೂರ್ವಕವಾಗಿ ಅಭಿನಂದಿಸುತ್ತೇನೆ ಎಂದರು.

ನಿವೃತ್ತ ಪ್ರಾಚಾರ್ಯ ಡಿ.ಎ ಅರವಟಗಿಮಠ ಮಾತನಾಡಿ, ಕಾರ್ಯವು ಶೀಘ್ರವೇ ಪ್ರಾರಂಭವಾಗುವಂತೆ ಮುಖ್ಯಮಂತ್ರಿಗಳು ನಿಗಾ ವಹಿಸಿ, ಈ ಕಾರ್ಯವನ್ನು ಆದಷ್ಟು ಬೇಗನೆ ಪೂರ್ಣಗೊಳಿಸಬೇಕು ಎಂದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ, ನ್ಯಾಯವಾದಿ ರಾಜಶೇಖರಗೌಡ ಪಾಟೀಲ, ಶಿಕ್ಷಕಿ ಭಾರತಿ ಶಿರ್ಸಿ, ನಿರ್ಮಲಾ ಹಿರೇಮಠ, ಸಂಚಾಲಕ ಈಶ್ವರ ಬೆಟಗೇರಿ, ಉಪಾಧ್ಯಕ್ಷ ಆರ್.ಎಸ್ ನರೇಗಲ್ಲ, ಕಾರ್ಯದರ್ಶಿ ಎಚ್.ವಿ ಈಟಿ, ಗುರುಪಾದಪ್ಪ ಬೆಲ್ಲದ, ಡಾ. ರಾಜೇಂದ್ರ ಗಚ್ಚಿನಮಠ, ಡಾ. ಎಸ್.ಜಿ ಗುರಿಕಾರ, ಉಪನ್ಯಾಸಕರಾದ ಡಾ. ಕಲ್ಲಯ್ಯ ಹಿರೇಮಠ, ಜಿ.ಜಿ ಕೋಟಿ, ನಿಕಟಪೂರ್ವ ಅಧ್ಯಕ್ಷ ಸುರೇಶ ಹಳ್ಳಿಕೇರಿ, ಸಂಘಟನಾ ಕಾರ್ಯದರ್ಶಿ ಸಿ.ಕೆ ಕೇಸರಿ, ಕೋಶಾಧ್ಯಕ್ಷ ಶಿವಯೋಗಿ ಜಕ್ಕಲಿ, ಎಸ್.ಸಿ ಗುಳಗಣ್ಣವರ, ಆದರ್ಶ ಕುಲಕರ್ಣಿ ಮುಂತಾದವರು ಮಾತನಾಡಿದರು.

## ಕೇಂದ್ರ ಬರ ಅಧ್ಯಯನ ತಂಡದಿಂದ ಜಿಲ್ಲೆಯ ಸ್ಥಿತಿ ಅವಲೋಕನ

▸▸ ಮೊದಲನೇ ಪುಟದಿಂದ

ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕೆ ಬೆಳೆಯನ್ನು ಬಿತ್ತನೆ ಮಾಡುವ ಮೂಲಕ ಶೇ 89.88ರಷ್ಟು ಬಿತ್ತನೆ ಮಾಡಲಾಗಿತ್ತು. ಇದರಲ್ಲಿ 21,337 ಹೆಕ್ಟೇರ್ ಈರುಳ್ಳಿ, 40,350 ಹೆ. ಮೆಣಸಿನಕಾಯಿ, 445 ಹೆ. ಪ್ರದೇಶದಲ್ಲಿ ಟೊಮೆಟೊ ಬಿತ್ತನೆ ಮಾಡಲಾಗಿತ್ತು. ಮಳೆಯ ಅಭಾವದಿಂದಾಗಿ ಈ ಎಲ್ಲ ಬೆಳೆಗಳು ಸಂಪೂರ್ಣ ನೆಲಕಚ್ಚಿದೆ. ಅದರಂತೆ ಆರು ತಾಲೂಕುಗಳ 1.63 ಲಕ್ಷ ಹೆ. ಪ್ರದೇಶದಲ್ಲಿ ಕೃಷಿ ಬೆಳೆ ಬಿತ್ತನೆ ಮಾಡಲಾಗಿತ್ತು. ಆ ಪೈಕಿ 1.54 ಲಕ್ಷ ಹೆ. ಪ್ರದೇಶದ ಬೆಳೆ ಸಂಪೂರ್ಣವಾಗಿ ಹಾನಿಯಾಗಿದೆ ಎಂದು ವಿವರಿಸಿದರು.

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಮಾರ್ಗಸೂಚಿಯಂತೆ ಗದಗ ಜಿಲ್ಲೆಯಲ್ಲಿ ಒಟ್ಟಾರೆ 21,553.22 ಲಕ್ಷ ರೂ ಮೊತ್ತದ ಬೆಳೆ ಹಾನಿಯಾಗಿದೆ. ಇದರಲ್ಲಿ ಕೃಷಿ ಇಲಾಖೆಯ 16,061.44 ಲಕ್ಷ ರೂ. ಹಾಗೂ ತೋಟಗಾರಿಕೆ ಇಲಾಖೆಯ 5491.78 ಲಕ್ಷ ರೂ. ಬೆಳೆ ಹಾನಿಯಾಗಿದೆ. ಮಳೆಯ ತೀವ್ರ ಕೊರತೆಯಿಂದಾಗಿ ಜಿಲ್ಲೆಯಲ್ಲಿ ಅಂತರ್ಜಲ ಮಟ್ಟವೂ ಕುಸಿದಿದೆ. ಸೆಪ್ಟೆಂಬರ್ 15ರಂದು 7.57 ಮೀಟರ್‌ನಲ್ಲಿದ್ದ ಅಂತರ್ಜಲ ಸೆಪ್ಟೆಂಬರ್ ಅಂತ್ಯದ ವೇಳೆಗೆ 10.51 ಮೀಟರ್ ತಲುಪಿದೆ. ಇದರಿಂದ ಜನ-ಜಾನುವಾರುಗಳಿಗೆ ನೀರು ಪೂರೈಕೆ ಕಷ್ಟ ಸಾಧ್ಯ ಎಂದರು.



### ರಸ್ತೆ ಅವ್ಯವಸ್ಥೆ ಕುರಿತು ಅಧಿಕಾರಿಗಳ ಅಸಹನೆ

ಜಿಲ್ಲೆಯ ಬರ ಅಧ್ಯಯನಕ್ಕೆ ಆಗಮಿಸಿದ್ದ ಕೇಂದ್ರ ಸರಕಾರದ ತಂಡ, ಜಿಲ್ಲೆಯಲ್ಲಿ ಸಂಚರಿಸುವ ಮಾರ್ಗದುದ್ದಕ್ಕೂ ಹದಗೆಟ್ಟ ರಸ್ತೆಯಲ್ಲಿ ಸುಸ್ತಾಗುವಂತಾಯಿತು. ಗೊಜನೂರನಿಂದ ಮುಳಗುಂದವರೆಗೆ ಕೇಂದ್ರ ತಂಡ ಸಾಗಿದ ಮಾರ್ಗ ಸಂಪೂರ್ಣ ಹಾಳಾಗಿದ್ದು, ತಗ್ಗು ದಿನ್ನೆಗಳಿಂದ ತುಂಬಿದ್ದ ರಸ್ತೆಯಲ್ಲಿ ಅಧಿಕಾರಿಗಳು ಐಷಾರಾಮಿ ಕಾರುಗಳಲ್ಲಿ ತುಳುಕಾಡುತ್ತಾ ಸಂಚರಿಸಿದರು. ರಸ್ತೆ ಅವ್ಯವಸ್ಥೆ ಕುರಿತಾಗಿ ಅಧಿಕಾರಿಗಳು ತಮ್ಮತಮ್ಮಲ್ಲಿಯೇ ಅಸಹನೆ ವ್ಯಕ್ತಪಡಿಸಿದರು.

ಜಿಲ್ಲೆಯ ಒಟ್ಟು 11 ಕಡೆಗಳಲ್ಲಿ ಬರ ಅಧ್ಯಯನ ತಂಡ ಭೇಟಿ ನೀಡಿದ್ದು, ಆ ಜಮೀನುಗಳು ರಸ್ತೆ ಪಕ್ಕದಲ್ಲಿಯೇ ಇದ್ದವು. ಆದರೆ ರಸ್ತೆಯಿಂದ ತುಸು ದೂರದಲ್ಲಿದ್ದ ಜಮೀನಿಗೂ ಭೇಟಿ ನೀಡುವಂತೆ ರೈತರು ಒತ್ತಾಯಿಸಿದರು ಅಧಿಕಾರಿಗಳು ಕಿವಿಗೊಡಲಿಲ್ಲ. ಬರದಿಂದ ತತ್ತರಿಸಿರುವ ರೈತರ ಕಷ್ಟವನ್ನು ಸರ್ಕಾರ ಪರಿಹರಿಸಲಿ ಎಂದು ಗೊಜನೂರ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು.

## ಹಿಂದೂ ಮಹಾಗಣಪತಿ ಆವರಣದಲ್ಲಿ ರಂಗೋಲಿ ಸ್ಪರ್ಧೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹಳೆ ಬಸ್ ನಿಲ್ದಾಣದ ಬಳಿ ಪ್ರತಿಷ್ಠಾಪನೆಗೊಂಡಿರುವ ಹಿಂದೂ ಮಹಾಗಣಪತಿ ಆವರಣದಲ್ಲಿ ರಂಗೋಲಿ ಸ್ಪರ್ಧೆ ಜರುಗಿತು.

ಸ್ಪರ್ಧಿಗಳು ಭಾರತದ ಪರಂಪರೆಯನ್ನು ಸಾರುವ ಹಾಗೂ ಗಣಪತಿಯ ವೈವಿಧ್ಯಮಯ ರಂಗೋಲಿಗಳನ್ನು ಚಿತ್ರಿಸಿ ನೋಡುಗರ ಹಾಗೂ ತೀರ್ಪುಗಾರರ ಮನಸೆಳೆದರು. ಕಾರ್ಯಕ್ರಮದ ಉಸ್ತುವಾರಿ ವಹಿಸಿದ್ದ ಅಶ್ವಿನಿ ಜಗತಾಪ್, ರತ್ನಾ ಕುರುಗೋಡ, ವಂದನಾ ವೆರ್ಣೆಕರ, ರೇಖಾ ಬೆಟಗೇರಿ, ಶೋಭಾ ಭಾಂಡಗೆ, ರಂಜನಾ ಕೊಟ್ಟಿ, ರೇಖಾ ಮೇದಾರ್, ರೇಖಾ ದಹಿಂಡೆ, ಸುಮಿತ್ರಾ ಚವ್ಹಾಣ, ಮಧು ಕೊಟ್ಟಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. 40ಕ್ಕೂ ಹೆಚ್ಚು ಸ್ಪರ್ಧಿಗಳು ಭಾಗವಹಿಸಿದ್ದರು. ಸ್ಪರ್ಧೆಯ ವಿಜೇತರ ವಿವರಗಳನ್ನು ಅ.8ರಂದು ಘೋಷಿಸಿ ಬಹುಮಾನ ನೀಡಲಾಗುವುದೆಂದು ತೀರ್ಪುಗಾರರು ತಿಳಿಸಿದ್ದಾರೆ.

## ಉದ್ಯಾನವನದಲ್ಲಿ ಉದಯರಾಗ, ಸಂಧ್ಯಾರಾಗ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಉದ್ಯಾನವನದಲ್ಲಿ ಉದಯರಾಗ ಹಾಗೂ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಅಕ್ಟೋಬರ್ 8ರಂದು ರವಿವಾರ ಬೆಳಿಗ್ಗೆ:6.30 ರಿಂದ 7.30 ರವರೆಗೆ ನಡೆಯುವ ಉದಯರಾಗ ಕಾರ್ಯಕ್ರಮದಲ್ಲಿ ರಾಜೀವಗಾಂಧಿ ನಗರದ ಶಿವಶರಣ ಹರಳಯ್ಯ ಉದ್ಯಾನವನದಲ್ಲಿ ಕೆ. ಟಿ. ಉಮೇಶರವರಿಂದ "ಸುಗಮ ಸಂಗೀತ" ವಿಶ್ವೇಶ್ವರಯ್ಯ ನಗರದ ವಿಶ್ವೇಶ್ವರಯ್ಯ ಉದ್ಯಾನವನದಲ್ಲಿ ಕರವೀರಯ್ಯ ಶಾಸ್ತ್ರಿಗಳು ವೆಂಕಟಾಪೂರ ಇವರಿಂದ "ಸುಗಮ ಸಂಗೀತ" ಸಾಯಂಕಾಲ: 5.30 ರಿಂದ 6.30 ಗಂಟೆಯವರೆಗೆ ಭೀಷ್ಮಕೆರೆಯ ಬಸವೇಶ್ವರ ಪುತ್ಥಳಿ ಆವರಣದಲ್ಲಿ ನಡೆಯುವ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಟಿ. ಅನಿಲಕುಮಾರ ಇವರಿಂದ "ಸುಗಮ ಸಂಗೀತ" ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

